ಸಂಪುಟ : 9 ಸಂಚಿಕೆ 74 ಪುಟ : 4 ಬೆಲೆ: 3.00 ರವಿವಾರ ಎಪ್ರಿಲ್ 21 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 74 Pages : 4 Price : 3.00 Sunday April 21 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಯಶಸ್ವಿಯಾದ 'ಜನತಾ ಸಂವಾದ' । ಜಿಲ್ಲೆಯ ಅಭಿವೃದ್ಧಿಯ ಕನಸು ಬಿಚ್ಚಿಟ್ಟ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ

ಗದಗ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಆದ್ಯತೆ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಆಹಾರ ಸಂಸ್ಕರಣಾ ಉದ್ಯಮ, ಜವಳಿ ಪಾರ್ಕ್, ಮೆಣಸಿನಕಾಯಿ ಕೋಲ್ಡ್ ಸ್ಟೋರೇಜ್, ಜಿಲ್ಲೆಗೆ ಪ್ರತ್ಯೇಕ ಹಾಲು ಉತ್ಪಾದನಾ ಒಕ್ಕೂಟ ಸೇರಿದಂತೆ ಗದಗ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಮಾಜಿ ಮುಖ್ಯಮಂತ್ರಿ, ಗದಗ-ಹಾವೇರಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದರು.

ಅವರು ಶನಿವಾರ ಗದಗ ನಗರದಲ್ಲಿ ಬಿಜೆಪಿ ಮುಖಂಡ ಅನಿಲ್ ಮೆಣಸಿನಕಾಯಿ ನೇತೃತ್ವದಲ್ಲಿ ಏರ್ಪಡಿಸಿದ್ದ 'ಜನತಾ ಸಂವಾದ' ಕಾರ್ಯಕ್ರಮದಲ್ಲಿ ಸಾರ್ವಜನಿಕರ ಅಹವಾಲು ಮತ್ತು ಸಲಹೆಗಳನ್ನು ಸ್ವೀಕರಿಸಿ ಮಾತನಾಡಿದರು.

ಪ್ರಜಾಪ್ರಭುತ್ವದಲ್ಲಿ ಜನರ ಭಾವನೆಗಳನ್ನು ಅರ್ಥ ಮಾಡಿಕೊಂಡರೆ ಹೆಚ್ಚು ಅನುಕೂಲವಾಗುತ್ತದೆ. ಪ್ರಜಾಪ್ರಭುತ್ವದಲ್ಲಿ ಕೇವಲ ಮತ ಹಾಕುವುದಷ್ಟೇ ಮುಖ್ಯವಲ್ಲ. ಆ ನಂತರದ ಆಗು-ಹೋಗುಗಳಲ್ಲಿ ಜನರು ಪಾಲ್ಗೊಳ್ಳಬೇಕು. ಅಭಿವೃದ್ಧಿಯಲ್ಲಿ ಜನರನ್ನು ಪಾಲುದಾರರನ್ನಾಗಿ ಮಾಡಬೇಕು. ಅದಕ್ಕೆ ಜನರ ಪಾಲ್ಗೊಳ್ಳುವಿಕೆ ಮುಖ್ಯವಾಗಿದೆ. ಅದನ್ನು ನಮ್ಮ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಆರಂಭಿಸಿದ್ದಾರೆ. ನಮ್ಮ ಪಕ್ಷದ ಸಂಕಲ್ಪ ಪತ್ರ ಕೂಡ ಇದೇ ಆಶಯ ಹೊಂದಿದೆ ಎಂದರು.

> ಗದಗನಲ್ಲಿ ಪ್ರಮುಖವಾಗಿ ನೀರಿನ ಸಮಸ್ಯೆ ಇದೆ. ನೀರಿನ ಸಮಸ್ಯೆಗೆ ಇದುವರೆಗೂ ಸೂಕ್ತ ಪರಿಹಾರ ಸಿಕ್ಕಿಲ್ಲ. ಮಲಪ್ರಭಾ ಯೋಜನೆಯಿಂದ ನೀರು ತಂದರೂ ಸೋರಿಕೆಯಾಗುತ್ತಿದೆ. ಸಿಂಗಟಾಲೂರು ಯೋಜನೆ ಮಾಡಿದ ಮೇಲೆ ಬ್ಯಾರೇಜ್‌ನಲ್ಲಿ ನೀರು ಸಂಗ್ರಹ ಮಾಡಲು ಅವಕಾಶವಾಗಿದೆ. ನಾನು ಮುಖ್ಯಮಂತ್ರಿಯಾಗಿದ್ದಾಗ ಅಮೃತ-2 ಯೊಜನೆ ಅಡಿ 140 ಕೋಟಿ ರೂ.ವೆಚ್ಚದಲ್ಲಿ ಕುಡಿಯುವ ನೀರಿನ ಯೋಜನೆ ಜಾರಿ ಮಾಡಿದ್ದೇವೆ. ಈಗಿನ ಸರ್ಕಾರ ಅದನ್ನು ಸರಿಯಾಗಿ ಅನುಷ್ಠಾನ ಮಾಡಿದರೆ, ಗದಗ ನಗರದ ನೀರಿನ ಬಹುತೇಕ ಸಮಸ್ಯೆಗೆ ಪರಿಹಾರ ದೊರೆಯುತ್ತದೆ.
>
> **– ಬಸವರಾಜ ಬೊಮ್ಮಾಯಿ.**
> ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ, ಮಾಜಿ ಮುಖ್ಯಮಂತ್ರಿಗಳು.

ಸಂವಾದದಲ್ಲಿ ಹಲವಾರು ಸಮಸ್ಯೆಗಳ ಪ್ರಸ್ತಾಪದೊಂದಿಗೆ ಸಲಹೆಗಳನ್ನು ನೀಡಿದ್ದೀರಿ, ಮೂಲಭೂತ ಸೌಕರ್ಯಗಳ ಬಗ್ಗೆ ಸಾಕಷ್ಟು ಮಾಹಿತಿ ನೀಡಿದ್ದೀರಿ, ನಮ್ಮನ್ನು ಚಿಂತನೆಗೆ ಹಚ್ಚಿದ್ದೀರಿ. ನಾನು ಪ್ರಾಮಾಣಿಕವಾಗಿ ನಿಮ್ಮ ಕೆಲಸ ಮಾಡುತ್ತೇನೆ ಎಂದರು.

ನೇಕಾರರ ಸಮಸ್ಯೆ ಕುರಿತು ಪ್ರಸ್ತಾಪ ಮಾಡಿದ್ದಾರೆ. ನಮ್ಮ ಅವಧಿಯಲ್ಲಿ ಹ್ಯಾಂಡ್‌ಲೂಮ್ ಮಾದರಿಯಲ್ಲಿ ಪವರ್ ಲೂಮ್ ನೇಕಾರರಿಗೆ ಸವಲತ್ತುಗಳನ್ನು ನೀಡಿದ್ದೇವೆ. ನೇಕಾರ ಸಮ್ಮಾನ ಯೋಜನೆ ಮಾಡಿದ್ದೇವೆ. 50 ಯುನಿಟ್‌ವರೆಗೆ ವಿದ್ಯುತ್ ಉಚಿತವಾಗಿ ನೀಡುವ ವ್ಯವಸ್ಥೆ ಮಾಡಿದ್ದೇವೆ. ಸಹಕಾರಿ ಬ್ಯಾಂಕ್ ಮಾದರಿಯಲ್ಲಿ ಸಾಲ ನೀಡುವ ವ್ಯವಸ್ಥೆ ಜಾರಿ ಮಾಡಲಾಗುವುದು ಎಂದರು.

ಮಾಜಿ ಸೈನಿಕರಿಗೆ ಭವನ ನಿರ್ಮಾಣ ಮಾಡಲು ಕ್ರಮ ವಹಿಸಲಾಗುವುದು. ಮುದ್ರಣ ಉದ್ಯಮಕ್ಕೆ ಅಗತ್ಯ ಸೌಲಭ್ಯ ಕೊಡುವ ಕೆಲಸ ಮಾಡಲಾಗುವುದು. ರಾಜ್ಯ ಸರ್ಕಾರ ಹಾಲು ಉತ್ಪಾದಕರಿಗೆ 1100

> ನಾನು ಸಿಎಂ ಇದ್ದಾಗ ಗದಗ ಸೇರಿ ಮೂರು ಕಡೆ ಜವಳಿ ಪಾರ್ಕ್ ಮಾಡಲು ಕೇಂದ್ರಕ್ಕೆ ಮನವಿ ಸಲ್ಲಿಸಿದ್ದೆ. ಮುಂದಿನ ದಿನಗಳಲ್ಲಿ ಗದುಗಿನಲ್ಲಿ ಜವಳಿ ಪಾರ್ಕ್ ಮಾಡಲು ಕ್ರಮ ಕೈಗೊಳ್ಳಲಾಗುವುದು. ಗಾರ್ಮೆಂಟ್ ಸ್ಥಾಪನೆ ಮಾಡುವುದರಿಂದ ಹೆಣ್ಣು ಮಕ್ಕಳಿಗೆ ಉದ್ಯೋಗ ಸಿಗುತ್ತದೆ. ಶಿಗ್ಗಾವಿಯಲ್ಲಿ ಗಾರ್ಮೆಂಟ್ ಸ್ಥಾಪನೆ ಮಾಡಿದ್ದು, ಅದರಿಂದ ಐದು ಸಾವಿರ ಮಹಿಳೆಯರು ಉದ್ಯೋಗ ಪಡೆದಿದ್ದಾರೆ. ಅದೇ ರೀತಿ ಗದುಗಿನಲ್ಲಿಯೂ ಸ್ಥಾಪನೆ ಮಾಡಲಾಗುವುದು. ಇದರಿಂದ ಹೆಚ್ಚಿನ ಮಹಿಳೆಯರಿಗೆ ಉದ್ಯೋಗವಕಾಶಗಳು ದೊರೆಯಲಿವೆ ಎಂದು ಬಸವರಾಜ ಬೊಮ್ಮಾಯಿ ಹೇಳಿದರು.

ಕೋಟಿ ರೂ.ಬಾಕಿ ಉಳಿಸಿಕೊಂಡಿದೆ. ಸ್ಥಳೀಯ ಮುಖಂಡರ ಸಹಕಾರ ಸಿಕ್ಕರೆ ಈ ಜಿಲ್ಲೆಗೂ ಪ್ರತ್ಯೇಕ ಹಾಲು ಉತ್ಪಾದಕರ ಒಕ್ಕೂಟ ಮಾಡಲು ಕ್ರಮ ವಹಿಸಲಾಗುವುದು. ಇದರಿಂದ ರೈತರಿಗೆ ಅನುಕೂಲವಾಗಲಿದೆ. ಇದಕ್ಕೆ ರಾಜ್ಯ ಸರ್ಕಾರದ ಸಹಕಾರ ಅಗತ್ಯವಿದೆ ಎಂದರು.

ಮೆಣಸಿನಕಾಯಿ ಬೆಳೆಗಾರರಿಗೆ ಕೋಲ್ಡ್ ಸ್ಟೋರೇಜ್ ಅಗತ್ಯವಿದ್ದು, ಈ ಭಾಗದಲ್ಲಿ ಕೋಲ್ಡ್ ಸ್ಟೋರೇಜ್ ಸ್ಥಾಪನೆ ಮಾಡಲಾಗುವುದು. ಇದಕ್ಕೆ ಸೂಕ್ತ ಜಮೀನಿನ ಅಗತ್ಯವಿದ್ದು, ಜಿಲ್ಲಾಡಳಿತದೊಂದಿಗೆ ಮಾತುಕತೆ ನಡೆಸಿ ಉದ್ಯಮಗಳನ್ನು ತರಲು ಪ್ರಯತ್ನ ಮಾಡಲಾಗುವುದು. ಗದಗ ಜಿಲ್ಲೆಗೆ ಪ್ರತ್ಯೇಕ ವಿಶ್ವ ವಿದ್ಯಾಲಯ ಸ್ಥಾಪನೆ ಮಾಡುವ ಕುರಿತು ರಾಜ್ಯ ಸರ್ಕಾರದ ಗಮನ ಸೆಳೆಯಲಾಗುವುದು ಎಂದು ಬಸವರಾಜ ಬೊಮ್ಮಾಯಿ ಹೇಳಿದರು.

ಬಂಜಾರಾ ಸಮುದಾಯದ ಮೀಸಲಾತಿ ಹೆಚ್ಚಳ ಮಾಡುವ ಕುರಿತು ಬಂದ ಪ್ರಸ್ತಾಪಕ್ಕೆ ಪ್ರತಿಕ್ರಿಯಿಸಿದ ಅವರು, ಮೀಸಲಾತಿ ಪ್ರಮಾಣ ಶೇ.50ರ ಮಿತಿ ಸಡಿಲಗೊಳಿಸಿದರೆ ಎಲ್ಲ ಸಮುದಾಯಗಳಿಗೆ ಮೀಸಲಾತಿ ಹೆಚ್ಚಳವಾಗುತ್ತದೆ. ಫುಡ್ ಪ್ರೊಸೆಸಿಂಗ್ ಪಾರ್ಕ್ ಮಾಡಲು ಹೆಚ್ಚಿನ ಅವಕಾಶ ಇದೆ. ಅದಕ್ಕೆ ಹೆಚ್ಚಿನ ಶ್ರಮ ವಹಿಸಲಾಗುವುದು. ಬೆಟಗೇರಿಯನ್ನು ನೇಕಾರರ ಹಬ್ ಮಾಡಲು ಕ್ರಮ ಕೈಗೊಳ್ಳಲಾಗುವುದು. ಇದೊಂದು ಕಣ್ಣು ತೆರೆಸುವ, ಸಕಾರಾತ್ಮಕ ಚರ್ಚೆಯ ಕಾರ್ಯಕ್ರಮವಾಗಿದೆ. ನಾವು-ನೀವು ಸೇರಿ ಮುಂದಿನ ದಿನಗಳಲ್ಲಿ ಸಮಸ್ಯೆಗೆ ಪರಿಹಾರ ಕಂಡುಕೊಳ್ಳೋಣ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಾಜಿ ಸಚಿವ ಸಿ.ಸಿ. ಪಾಟೀಲ್, ಬಿಜೆಪಿ ಮುಖಂಡ ಅನಿಲ್ ಮೆಣಸಿನಕಾಯಿ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಕಾಂತಿಲಾಲ್ ಬನ್ಸಾಲಿ ಮತ್ತಿತರರು ಹಾಜರಿದ್ದರು.

ಉಚಿತ ಆರೋಗ್ಯ ಶಿಬಿರ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಗದ್ಗುರು ತೋಂಟದಾರ್ಯ ಮಠದ 2024ನೇ ಸಾಲಿನ ಜಾತ್ರಾ ಮಹೋತ್ಸವದ ಅಂಗವಾಗಿ ಏ.21ರಂದು ಬೆಳಿಗ್ಗೆ 9 ಗಂಟೆಗೆ ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಉಚಿತ ಆರೋಗ್ಯ ಶಿಬಿರ ಜರುಗಲಿದೆ.

ಖ್ಯಾತ ಮನೋರೋಗ ತಜ್ಞರಾದ ಡಾ. ಆನಂದ ಪಾಂಡುರಂಗಿ ಅವರಿಂದ ಮನೋರೋಗಿಗಳ ತಪಾಸಣೆ, ಜಾತ್ರಾ ಆರೋಗ್ಯ ಸಮಿತಿ ಅಧ್ಯಕ್ಷರಾದ ಡಾ. ಚಂದ್ರಶೇಖರ ಆರ್.ಬಳ್ಳಾರಿ ಅವರ ನೇತೃತ್ವದಲ್ಲಿ ನುರಿತ ತಜ್ಞ ವೈದ್ಯರಿಂದ ವಿವಿಧ ರೋಗಗಳಾದ ಸ್ತ್ರೀರೋಗ, ಚಿಕ್ಕ ಮಕ್ಕಳ ರೋಗ, ಕಿವಿ, ಮೂಗು, ಗಂಟಲು, ಚರ್ಮ, ಎಲುಬು ಹಾಗೂ ಕೀಲುಗಳು, ಡೆಂಟಲ್, ಹೃದ್ರೋಗ, ಹಿಮೋಗ್ಲೋಬಿನ್, ಮಧುಮೇಹ, ಬಿಪಿ., ಕಣ್ಣಿನ ತಪಾಸಣೆ ಮುಂತಾದ ರೋಗಗಳಿಗೆ ಉಚಿತ ತಪಾಸಣೆ ಮತ್ತು ಚಿಕಿತ್ಸೆ ನೀಡಲಾಗುವುದು.

ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಈ ಶಿಬಿರದ ಪ್ರಯೋಜನವನ್ನು ಪಡೆಯಲು ಜಾತ್ರಾ ಸಮಿತಿಯ ಅಧ್ಯಕ್ಷ ಪ್ರೊ. ಕೆ.ಎಚ್. ಬೇಲೂರ ಹಾಗೂ ಪದಾಧಿಕಾರಿಗಳು ವಿನಂತಿಸಿದ್ದಾರೆ.

ನೇಹಾ ಹತ್ಯೆ ಖಂಡಿಸಿ ಪ್ರತಿಭಟನೆ

■ ವಿಜಯಸಾಕ್ಷಿ ಸುದ್ದಿ, ರೋಣ

ಹುಬ್ಬಳ್ಳಿಯಲ್ಲಿ ವಿದ್ಯಾರ್ಥಿನಿ ನೇಹಾ ಹಿರೇಮಠ ಹತ್ಯೆಯನ್ನು ಖಂಡಿಸಿ ಶನಿವಾರ ರೋಣ ಪಟ್ಟಣದಲ್ಲಿ ಎಬಿವಿಪಿ ಹಾಗೂ ವಿಶ್ವ ಹಿಂದೂ ಪರಿಷತ್ ವತಿಯಿಂದ ಬೃಹತ್ ಪ್ರತಿಭಟನೆ ನಡೆಯಿತು.

ಪಟ್ಟಣದ ವಿವಿದ ಶಾಲಾ-ಕಾಲೇಜುಗಳಿಂದ ಆಗಮಿಸಿದ ನೂರಾರು ವಿದ್ಯಾರ್ಥಿಗಳು ನೇಹಾ ಹಿರೇಮಠ ಹತ್ಯೆಯನ್ನು ಖಂಡಿಸಿ ತೀವ್ರ ಆಕ್ರೋಶ ವ್ಯಕ್ತಪಡಿಸಿ, ನೇಹಾ ಹತ್ಯೆಗೈದ ಅಪರಾಧಿಗೆ ಗಲ್ಲು ಶಿಕ್ಷೆ ನಿಡಬೇಕು ಎಂದು ಆಗ್ರಹಿಸಿದರು.

ಮುಖಂಡ ವಿರೇಶ ದೊಡ್ಡಣ್ಣವರ ಮಾತನಾಡಿ, ನಮ್ಮದು ಸ್ತ್ರೀಯರನ್ನು ಪೂಜಿಸುವ ಸಂಸ್ಕೃತಿಯಾಗಿದೆ. ಯಾವುದೇ ಮಹಿಳೆ ಅಥವಾ ವಿದ್ಯಾರ್ಥಿನಿ ಮೆಲೆ ಇಂತಹ ಘಟನೆಗಳು ನಡೆಯಬಾರದು. ಎಲ್ಲರ ಮನೆಯಲ್ಲಿಯೂ ತಾಯಿ, ಸಹೋದರಿ ಇರುತ್ತಾರೆ ಎನ್ನುವುದನ್ನು ಅರಿತಾಗ ಮಾತ್ರ ಇಂತಹ ಘಟನೆಗಳು ನಿಲ್ಲಲು ಸಾಧ್ಯ ಎಂದ ಅವರು, ನೇಹಾ ಹತ್ಯೆಗೈದ ವ್ಯಕ್ತಿಗೆ ಕಠಿಣ ಶಿಕ್ಷೆಯನ್ನು ವಿಧಿಸಬೇಕು ಎಂದು ಆಗ್ರಹಿಸಿದರು.

ಸಿದ್ದಾರೂಡ ಮಠದಿಂದ ಆರಂಭಗೊಂಡು ಸೂಡಿ ವೃತ್ತ, ಮುಲ್ಲಾನ ಭಾವಿ, ಪೋತರಾಜನ ಕಟ್ಟೆಯ ಮೂಲಕ ತಹಸೀಲ್ದಾರ್ ಕಚೇರಿಗೆ ತೆರಳಿ ಮನವಿ ಸಲ್ಲಿಸಿದರು. ಇದಕ್ಕೂ ಮೊದಲು ಪ್ರತಿಭಟನಾ ನಿರತ ವಿದ್ಯಾರ್ಥಿಗಳು ಸೂಡಿ ವೃತ್ತದಲ್ಲಿ ಮಾನವ ಸರಪಳಿಯನ್ನು ನಿರ್ಮಿಸಿ ಸರ್ಕಾರದ ವಿರುದ್ಧ ಅಸಮದಾನವನ್ನು ಹೊರಹಾಕಿದರು. ಈ ಸಂಧರ್ಭದಲ್ಲಿ ನೂರಾರು ವಿದ್ಯಾರ್ಥಿಗಳು ಹಾಗೂ ಹಿಂದೂ ಸಂಘಟನೆಯ ಮುಖಂಡರು ಉಪಸ್ಥಿತರಿದ್ದರು.

ಪತ್ರಿಕಾಗೋಷ್ಠಿಯಲ್ಲಿ ಪ್ರಮೋದ್ ಮುತಾಲಿಕ್ ಆರೋಪ

ಅಂಜುಮನ್ ಇಸ್ಲಾಂ ಸಂಸ್ಥೆಯಿಂದ ಮೊಸಳೆ ಕಣ್ಣೀರು

■ ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯಲ್ಲಿ ನಡೆದ ವಿದ್ಯಾರ್ಥಿನಿ ನೇಹಾ ಹಿರೇಮಠ ಕೊಲೆ ಪ್ರಕರಣಕ್ಕೆ ಸಂಬಂಧಿಸಿ ಅಂಜುಮನ್ ಇಸ್ಲಾಂ ಸಂಸ್ಥೆ ಮೊಸಳೆ ಕಣ್ಣೀರು ಸುರಿಸುತ್ತಾ ನಾಟಕವಾಡುತ್ತಿದೆ ಎಂದು ಶ್ರೀರಾಮ ಸೇನಾ ಸಂಸ್ಥಾಪಕ ಪ್ರಮೋದ್ ಮುತಾಲಿಕ್ ಆರೋಪಿಸಿದರು.

ಶನಿವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಅಂಜುಮನ್ ಇಸ್ಲಾಂ ಸಂಸ್ಥೆ ನಿಜವಾಗಿಯೂ ಈ

ಬಗ್ಗೆ ಕಳಕಳಿ ಹೊಂದಿದ್ದರೆ ಹಿಂದೆ ನಡೆದ ಘಟನೆಗಳಿಗೆ ಸಂಬಂಧಿಸಿದಂತೆ ಯಾಕೆ ಬಾಯಿ ಬಿಟ್ಟಿಲ್ಲ? ನೇಹಾ ಹಿರೇಮಠ ಕಾಂಗ್ರೆಸ್ ಕಾರ್ಪೊರೇಟರ್ ಮಗಳು ಎನ್ನುವ ಕಾರಣಕ್ಕೆ

> ರಾಜ್ಯದಲ್ಲಿ ಹಿಂದೂ ವಿರೋಧಿ ಸರ್ಕಾರ ಇದೆ. ಹೀಗಾಗಿ ಹಿಂದೂಗಳಿಗೆ ರಕ್ಷಣೆ ಇಲ್ಲ. ಸರ್ಕಾರ ಮುಸ್ಲಿಮರ ಓಲೈಕೆ ಮಾಡುತ್ತಿದೆ. ಕಾಂಗ್ರೆಸ್ ಈ ಹಿಂದೆ ಬ್ರಿಟಿಷರ ಪರ ಇತ್ತು. ಈಗ ಮುಸ್ಲಿಂ ಪರವಾಗಿದೆ ಎಂದು ಕಿಡಿಕಾರಿದ ಪ್ರಮೋದ ಮುತಾಲಿಕ, ರಾಜ್ಯ ಸರಕಾರದ ಈ ಧೋರಣೆಯನ್ನು ಖಂಡಿಸಿ ಇದೇ ಏಪ್ರಿಲ್ 22ರಂದು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಪ್ರಮೋದ ಮುತಾಲಿಕ್ ತಿಳಿಸಿದರು.

ಮಾತಾಡುತ್ತಿದ್ದೀರಿ. ಅಂಜುಮನ್ ಇಸ್ಲಾಂ ಸಂಸ್ಥೆಗೆ ನಿಜವಾಗಿಯೂ ಕಳಕಳಿ ಇದ್ದರೆ ಆರೋಪಿಯ ಮನೆ ಧ್ವಂಸ ಮಾಡಿ, ಆ ಕುಟುಂಬಕ್ಕೆ ಬಹಿಷ್ಕಾರ ಹಾಕಿ ಫತ್ವಾ ಹೊರಡಿಸಿ ಎಂದು ಸವಾಲು ಹಾಕಿದರು.

ಈ ಸಂದರ್ಭದಲ್ಲಿ ಶ್ರೀರಾಮಸೇನೆ ರಾಜ್ಯಾಧ್ಯಕ್ಷ ಗಂಗಾಧರಜೀ ಕುಲಕರ್ಣಿ, ರಾಜು ಖಾನಪ್ಪನವರ್, ಬಸವರಾಜ ಕುರ್ತಕೋಟಿ, ಕಿರಣ ಹಿರೇಮಠ, ಸತೀಶ್ ಕುಂಬಾರ, ಶಿವಯೋಗಿ ಹಿರೇಮಠ, ಮಹೇಶ ರೋಕಡೆ, ಸೋಮು ಗುಡಿ, ಸುರೇಶ್ ಹಾದಿಮನಿ ಮುಂತಾದವರಿದ್ದರು.

ಕಾಂಗ್ರೆಸ್ ಅಭ್ಯರ್ಥಿಯಿಂದ ರೋಡ್ ಶೋ

■ ವಿಜಯಸಾಕ್ಷಿ ಸುದ್ದಿ, ರೋಣ

ಪಟ್ಟಣದಲ್ಲಿ ಶನಿವಾರ ಹಾವೇರಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಹಾಗೂ ಶಾಸಕ ಜಿ.ಎಸ್. ಪಾಟೀಲ ನೇತೃತ್ವದಲ್ಲಿ ಬೃಹತ್ ರೋಡ್ ಶೋ ಕಾರ್ಯಕ್ರಮ ನಡೆಯಿತು.

ಪಟ್ಟಣದ ಲಕ್ಷ್ಮೀ ದೇವಸ್ಥಾನದಲ್ಲಿ ಪೂಜೆ ಸಲ್ಲಿಸುವ ಮೂಲಕ ಆರಂಭಗೊಂಡ ರೋಡ್ ಶೋನಲ್ಲಿ ಸಾವಿರಾರು ಕಾರ್ಯಕರ್ತರು ಭಾಗಿಯಾಗಿ, ಕಾಂಗ್ರೆಸ್ ಪಕ್ಷದ ಪರವಾಗಿ ಜಯಘೋಷಗಳನ್ನು ಕೂಗಿ, ಪಕ್ಷದ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಪರವಾಗಿ ಮತಯಾಚನೆ ಮಾಡಿದರು.

ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ರಾಜ್ಯ ಸೇರಿದಂತೆ ದೇಶದಲ್ಲಿ ಕಾಂಗ್ರೆಸ್ ಪಕ್ಷದ ಪರವಾಗಿ ಮತದಾರರ ಅಲೆ ಆರಂಭವಾಗಿರುವುದು ಈಗಾಗಲೇ ಸಾಬೀತಾಗಿದೆ ಎಂದರು.

ರೋಡ್ ಶೋ ಸಂದರ್ಭದಲ್ಲಿ ಪಟ್ಟಣದ ಮಹಿಳೆಯರು ಶಾಸಕ ಜಿ.ಎಸ್. ಪಾಟೀಲ ಹಾಗೂ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠರಿಗೆ ಅಭೂತಪೂರ್ವ ಸ್ವಾಗತ ಕೋರಿದರು. ಐ.ಎಸ್. ಪಾಟೀಲ, ಸಂಗನಗೌಡ ಪಾಟೀಲ, ವೀರಣ್ಣ ಶೆಟ್ಟರ್, ಬಾವಾಸಾಬ ಬೆಟಗೇರಿ, ಸಿದ್ದಣ್ಣ ಬಂಡಿ, ವ್ಹಿ.ಬಿ. ಸೋಮನಕಟ್ಟಿಮಠ, ಅಕ್ಷಯ ಪಾಟೀಲ, ಪ್ರಭು ಮೇಟಿ, ಯೂಸುಪ್ ಇಟಗಿ, ಶಫೀಕ ಮೂಗನೂರ, ಗದಿಗೇಪ್ಪ ಕಿರೇಸೂರ, ಇಸ್ಮಾಯಿಲ್ ಹೊರಪೇಟಿ, ಶಿವು ಹುಲ್ಲೂರ, ಆನಂದ ಚಂಗಳಿ, ಮೌನೇಶ ಹಾದಿಮನಿ, ದಾವಲ ಬಾಡಿನ ಸೇರಿದಂತೆ ಮುಖಂಡರು ಹಾಗೂ ಕಾರ್ಯಕರ್ತರು ಭಾಗಿಯಾಗಿದ್ದರು.

ಸಂಪಾದಕೀಯ

ಸಂವಿಧಾನ ಬಿಡಿ, ಮೊದಲು ಕಾನೂನು ಬದಲಾಯಿಸಿ

ಹುಬ್ಬಳ್ಳಿಯ ವಿದ್ಯಾರ್ಥಿನಿ ನೇಹಾ ಹಿರೇಮಠ ಕೊಲೆ ಪ್ರಕರಣದ ನಂತರ ಜನಾಕ್ರೋಶ ಮತ್ತಷ್ಟು ಹೆಚ್ಚಾಗುತ್ತಿದೆ. ಪ್ರಕರಣದ ತನಿಖೆಗಿಂತ ಅದನ್ನ ರಾಜಕೀಯಕ್ಕೆ ಹೇಗೆ ಬಳಸಿಕೊಳ್ಳಬೇಕು, ಈಗಾಗಲೇ ಹೇಗೆ ಬಳಸಿಕೊಂಡಿದ್ದಾರೆ ಎನ್ನುವುದು ಪ್ರಜ್ಞಾವಂತರ ಅರಿವಿಗೆ ಬಂದಿದೆ.

ಕೊಲೆ ಪ್ರಕರಣದ ಚರ್ಚೆ ಮತ್ತೆ ಮುಂದುವರಿಸಲು ಸಕಾರಣವೂ ಇದೆ. ಆವೇಶ, ಆಕ್ರೋಶದಲ್ಲಿ ಕೊಲೆ ಮಾಡಿದವನನ್ನ ಗುಂಡಿಟ್ಟು ಕೊಲ್ಲಬೇಕು. ನೇಣಿಗೆ ಹಾಕಬೇಕು. ಕಠಿಣ ಶಿಕ್ಷೆ ನೀಡಬೇಕು ಎನ್ನುವುದು ಎಲ್ಲರ ಒತ್ತಾಸೆ.

ಬಿಜೆಪಿ ನಾಯಕರು ಮಾತ್ರವಲ್ಲದೆ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಸಹ ಆರೋಪಿಗೆ ಎನ್ ಕೌಂಟರ್ ಮಾಡಬೇಕು ಎನ್ನುವ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ. ಚುನಾವಣಾ ಪ್ರಚಾರಾರ್ಥ ಕರ್ನಾಟಕಕ್ಕೆ ಆಗಮಿಸಿರುವ ಪ್ರಧಾನಿ ನರೇಂದ್ರ ಮೋದಿ ಸಹ, ಪರೋಕ್ಷವಾಗಿ ಆರೋಪಿಗೆ ಕಠಿಣ ಶಿಕ್ಷೆ ಆಗಬೇಕು. ಇಂತಹ ಘಟನೆಗಳಿಗೆ ಕಾಂಗ್ರೆಸ್ ಸರ್ಕಾರ ಕಾರಣ ಎನ್ನುವುದನ್ನು ಸೂಚ್ಯವಾಗಿ ತಮ್ಮ ಮಾತಿನಲ್ಲಿ ತಿಳಿಸಿದ್ದಾರೆ.

ಹಾಗಿದ್ದರೆ ಕೊಲೆ ಆರೋಪಿಗೆ ಕಠಿಣ ಶಿಕ್ಷೆ ವಿಧಿಸುವಂತಹ ಕಾನೂನು ಬದಲಾವಣೆಗೆ ಬಿಜೆಪಿ ಏಕೆ ಮುಂದಾಗಿಲ್ಲ. ಪದೇ ಪದೇ ಸಂವಿಧಾನ ಬದಲಾಯಿಸುವ ಬಗ್ಗೆ ಮಾತನಾಡುವ ಬಿಜೆಪಿಯ ಸಂಸದರು, ಅತ್ಯಾಚಾರಿಗಳಿಗೆ, ಕೊಲೆ ಪಾತಕಿಗಳಿಗೆ ಗುಂಡಿಟ್ಟು ಕೊಲ್ಲುವಂತಹ ಕಾನೂನು ತಿದ್ದುಪಡಿ ಮಾಡಲು ಏಕೆ ಮುಂದಾಗಿಲ್ಲ.

ಜಮ್ಮು ಕಾಶ್ಮೀರಕ್ಕೆ ನೀಡಿದ ವಿಶೇಷ ಸ್ಥಾನಮಾನವನ್ನ ಹಿಂಪಡೆಯಲು ಸಾಧ್ಯವಾಗುವುದಾದರೆ, ಅತ್ಯಾಚಾರಿಗಳಿಗೆ ಮತ್ತು ಕೊಲೆ ಮಾಡಿದವರಿಗೆ ಜನ ಬಯಸಿದ ರೀತಿಯಲ್ಲಿ ಕಠಿಣ ಶಿಕ್ಷೆ ನೀಡುವಂತಹ ಕಾನೂನು ತಿದ್ದುಪಡಿ ಮಾಡಲು ಏಕೆ ಸಾಧ್ಯವಾಗಿಲ್ಲ?

ಅಸಲಿಗೆ ಬಿಜೆಪಿ ನಾಯಕರಿಗೆ ಇಂತಹ ಕಠಿಣ ಕಾನೂನು ಜಾರಿ ಮಾಡುವ ಮನಸ್ಸಿಲ್ಲ. ಕಾರಣ, ಪ್ರಕರಣ ತ್ವರಿತವಾಗಿ ಇತ್ಯರ್ಥವಾದರೆ ರಾಜಕೀಯ ಲಾಭ ಸಿಗುವುದಿಲ್ಲ ಎನ್ನುವ ಲೆಕ್ಕಾಚಾರ. ಕೊಲೆ ಮಾಡಿದವನಿಗೆ ಒಂದೇ ತಿಂಗಳಲ್ಲಿ ಗುಂಡಿಟ್ಟು ಕೊಲ್ಲುವಂತಾದರೆ ಜನ ಬಹುಬೇಗ ಮರೆತುಬಿಡುತ್ತಾರೆ. ಜನಾಕ್ರೋಶ ಬಹುಬೇಗ ತಣ್ಣಗಾಗುತ್ತದೆ. ಹಾಗಾದರೆ ತಮ್ಮ ರಾಜಕೀಯ ಬೇಳೆ ಬೇಯುವುದಿಲ್ಲ. ಕೇವಲ ರಾಜಕೀಯ ಲಾಭದ ಲೆಕ್ಕಾಚಾರ ಬಯಸುವ ರಾಜಕೀಯ ಪಕ್ಷಗಳು ಅಧಿಕಾರದಲ್ಲಿ ಇರುವವರೆಗೂ, ಕ್ರೂರಿಗಳಿಗೆ ಶಿಕ್ಷೆಯಾಗುವುದಿಲ್ಲ.

ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟಿಸಿದ ವಿದ್ಯಾರ್ಥಿಯನ್ನು ಅಮಾನತುಗೊಳಿಸಿದ ಟಿಐಎಸ್‌ಎಸ್

■ ವಿಜಯಸಾಕ್ಷಿ ಸುದ್ದಿ, ಮುಂಬೈ

ಕೇಂದ್ರ ಸರ್ಕಾರದ ನೀತಿಗಳ ವಿರುದ್ಧದ ಪ್ರತಿಭಟನೆಯಲ್ಲಿ ಪಾಲ್ಗೊಂಡ ದಲಿತ ವಿದ್ಯಾರ್ಥಿಯನ್ನು ಮುಂಬೈನ ಟಾಟಾ ಇನ್ಸ್ಟಿಟ್ಯೂಟ್ ಆಫ್ ಸೋಶಿಯಲ್ ಸೈನ್ಸಸ್ (ಟಿಐಎಸ್‌ಎಸ್) ಎರಡು ವರ್ಷಗಳ ಅವಧಿಗೆ ಅಮಾನತು ಮಾಡಿದೆ ಎಂದು ತಿಳಿದು ಬಂದಿದೆ.

ಪಿಹೆಚ್‌ಡಿ ಸಂಶೋಧನಾ ವಿದ್ಯಾರ್ಥಿ ರಾಮದಾಸ್ ಪ್ರಿನಿ ಶಿವಾನಂದ ಅಮಾನತುಗೊಂಡವರು. ಇವರ ವಿರುದ್ಧ 'ಪುನರಾವರ್ತಿತ ದುರ್ನಡತೆ ಮತ್ತು ದೇಶವಿರೋಧಿ ಚಟುವಟಿಕೆ'ಗಳ ಆರೋಪ ಹೊರಿಸಲಾಗಿದೆ ಎಂದು ಇಂಡಿಯನ್ ಎಕ್ಸ್‌ಪ್ರೆಸ್ ವರದಿ ಮಾಡಿದೆ.

ಶಿವಾನಂದ ಅವರು ಕಳೆದ ಜನವರಿಯಲ್ಲಿ ಕೇಂದ್ರ ಸರ್ಕಾರದ ನೂತನ ಶಿಕ್ಷಣ ನೀತಿ ಅಥವಾ ರಾಷ್ಟ್ರೀಯ ಶಿಕ್ಷಣ ನೀತಿ (ಎನ್‌ಇಪಿ) ವಿರುದ್ಧ ದೆಹಲಿಯ ಜಂತರ್ ಮಂತರ್‌ನಲ್ಲಿ ಆಯೋಜಿಸಿದ್ದ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು. ಅಲ್ಲಿ ಅವರು ಪ್ರೊಗ್ರೇಸಿವ್ ಸ್ಟೂಡೆಂಟ್ಸ್ ಫೋರಂ (ಪಿಎಸ್‌ಎಫ್) ಸಂಘಟನೆಯನ್ನು ಪ್ರತಿನಿಧಿಸಿದ್ದರು ಎಂದು ವರದಿಗಳು ಹೇಳಿವೆ.

ಟಿಐಎಸ್‌ಎಸ್-ಪಿಎಸ್‌ಎಫ್ ಎಂಬ ಬ್ಯಾನರ್ ಅಡಿಯಲ್ಲಿ ಶಿವಾನಂದ ಅವರು ವಿದ್ಯಾರ್ಥಿ ಸಂಘಟನೆಗಳ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು. ಪಿಎಸ್‌ಎಫ್ ಸಂಘಟನೆ ಟಿಐಎಸ್‌ಎಸ್‌ನ ಅಧಿಕೃತ ಸಂಘಟನೆಯಲ್ಲ. ಶಿವಾನಂದ ಅವರು ಸಂಘಟನೆಯ ಹೆಸರಿನ ಜೊತೆ ಸಂಸ್ಥೆಯ ಹೆಸರನ್ನು ದುರ್ಬಳಕೆ ಮಾಡಿಕೊಂಡು ಶಿಸ್ತು ನಿಯಮಗಳನ್ನು ಉಲ್ಲಂಘಿಸಿದ್ದಾರೆ ಎಂದು ಟಿಐಎಸ್‌ಎಸ್ ಆರೋಪಿಸಿದೆ.

ಬಿಜೆಪಿ ಸಂವಿಧಾನ ಬದಲಾಯಿಸುವ ಬಯಕೆ ಹೊಂದಿದೆ: ಜೈರಾಮ್ ರಮೇಶ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಬಿಜೆಪಿಯ 'ಅಬ್ ಕಿ ಬಾರ್ 400 ಪಾರ್' ಯೋಜನೆಯು ಸಂವಿಧಾನವನ್ನು ಬದಲಾಯಿಸುವ ಬಯಕೆಯನ್ನು ಸೂಚಿಸುತ್ತದೆ. ಪ್ರಧಾನಿ ನರೇಂದ್ರ ಮೋದಿ ಅವರು ಮಹಾತ್ಮ ಗಾಂಧಿಯವರ ಪರಂಪರೆ ಮತ್ತು ಅವರ ಮೌಲ್ಯಗಳನ್ನು ನಿಜವಾಗಿಯೂ ಗೌರವಿಸುತ್ತಾರೆಯೇ ಎಂದು ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್ ಪ್ರಶ್ನಿಸಿದ್ದಾರೆ.

ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಅವರು ಮಹಾರಾಷ್ಟ್ರದ ವಾರ್ಧಾದಲ್ಲಿ ಮೋದಿ ಅವರ ಯೋಜನೆಗಿಂತ ಮೊದಲು ಬಿಜೆಪಿ ಮತ್ತು ಪ್ರಧಾನಿ ಮೋದಿ ವಿರುದ್ಧ ವಾಗ್ಧಾಳಿಯನ್ನು ನಡೆಸಿದ್ದು, ವಾರ್ಧಾ ಒಂದು ಕಾಲದಲ್ಲಿ ಮಹಾತ್ಮಾ ಗಾಂಧಿ ವಾಸಿಸುತ್ತಿದ್ದ ನಗರವಾಗಿದೆ. ಇಂದು ಮಹಾತ್ಮರ ಆದರ್ಶಗಳ ಮೇಲೆ ಪ್ರಧಾನಿಯವರ ಪಕ್ಷದ ನಾಯಕರಿಂದ ದಾಳಿ ನಡೆಯುತ್ತಿದೆ. ಪ್ರಧಾನಿ ಮೋದಿ ಅವರು ಗಾಂಧಿಯವರ ಪರಂಪರೆ ಮತ್ತು ಅವರು ಪ್ರತಿಪಾದಿಸಿದ ಮೌಲ್ಯಗಳನ್ನು ನಿಜವಾಗಿಯೂ ಗೌರವಿಸುತ್ತಾರೆಯೇ ಎಂದು ರಮೇಶ್ ಪ್ರಶ್ನಿಸಿದರು.

ರೈತರ ಆತ್ಮಹತ್ಯೆ ತಡೆಯಲು ಪ್ರಧಾನಿ ಏನು ಮಾಡಿದ್ದಾರೆ? ಅರಣ್ಯ ಹಕ್ಕು ಕಾಯ್ದೆ ಅನುಷ್ಠಾನದಲ್ಲಿ ಬಿಜೆಪಿ ಆದಿವಾಸಿಗಳನ್ನು ಏಕೆ ನಿರಾಸೆಗೊಳಿಸಿದೆ? ಗಾಂಧಿ ಮತ್ತು ಗೋಡ್ಸೆ ವಿಚಾರದಲ್ಲಿ ಪ್ರಧಾನಿ ಯಾರ ಪರ ನಿಂತಿದ್ದಾರೆ? ಎಂದು ಜೈರಾಮ್ ರಮೇಶ್ ಅವರು ಎಕ್ಸ್‌ನಲ್ಲಿನ ಪೋಸ್ಟ್‌ನಲ್ಲಿ ಪ್ರಶ್ನಿಸಿದ್ದಾರೆ.

ಮಹಾರಾಷ್ಟ್ರದಲ್ಲಿ ದಿನಕ್ಕೆ 7 ರೈತರು ತಮ್ಮ ಪ್ರಾಣವನ್ನು ತೆಗೆದುಕೊಳ್ಳುತ್ತಾರೆ. ಈ ಅಂಕಿ-ಅಂಶಗಳನ್ನು ರಾಜ್ಯದ ಸಚಿವರೋರ್ವರು ನೀಡಿದ್ದಾರೆ. ಅವರು ಕಳೆದ ವರ್ಷದ ಜನವರಿಯಿಂದ-ಅಕ್ಟೋಬರ್ ನಡುವೆ 2,366 ರೈತರು ಆತ್ಮಹತ್ಯೆಯಿಂದ ಸಾವನ್ನಪ್ಪಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ. ಕಳೆದ ವರ್ಷ 60 ಪ್ರತಿಶತ ಜಿಲ್ಲೆಗಳು ಬರ ಪರಿಸ್ಥಿತಿಯನ್ನು ಎದುರಿಸಿದವು ಆದರೆ ಸರಕಾರದಿಂದ ಯಾವುದೇ ಸಹಾಯ ಬಂದಿಲ್ಲ ಎಂದು ಹೇಳಿದ್ದಾರೆ.

ಬಸವರಾಜ ಹೊರಟ್ಟಿಯವರ ಯಶೋಗಾಥೆಗಳ ಕುರಿತ ಗ್ರಂಥಗಳ ಲೋಕಾರ್ಪಣೆ ಏ.23ಕ್ಕೆ

ಅಪರೂಪದ ರಾಜಕಾರಣಿಗೆ ಗ್ರಂಥ ನಮನ

ಇಂದು ಉದ್ಯಮವಾಗಿರುವ ರಾಜಕೀಯ ಕ್ಷೇತ್ರದಲ್ಲಿ ಶುದ್ಧ ಹಸ್ತರಾಗಿ ರಾಜಕಾರಣ ಮಾಡುವುದೆಂದರೆ ದಿನವೂ ಅಗ್ನಿ ದಿವ್ಯಗಳನ್ನು ಹಾಯುವ, ನೋವು-ಸಂಕಟಗಳನ್ನು ಜೀರ್ಣಿಸಿಕೊಳ್ಳುವ ನೈತಿಕ ಶಕ್ತಿ ರಾಜಕಾರಣಿಗಳಿಗೆ ಇರಬೇಕಾಗುತ್ತದೆ. ಅಂಥಹ ನೈತಿಕ ಶಕ್ತಿಯ ಪ್ರತೀಕ ವೆಂಬಂತೆ ಬಸವರಾಜ ಹೊರಟ್ಟಿಯವರು ಕಾಣಿಸುತ್ತಿದ್ದಾರೆ.

ಹೊರಟ್ಟಿಯವರನ್ನು ಸಮೀಪದಿಂದ ಕಂಡವರಿಗೆ ಮಾತ್ರ ಅವರಲ್ಲೊಬ್ಬ ಅಪ್ಪಟ ಮನುಷ್ಯ ಕಾಣಿಸುತ್ತಾನೆ. ಅಧಿಕಾರದ ಮದವಾಗಲಿ, ಜನಪ್ರಿಯತೆಯ ಭ್ರಮೆಯಾಗಲಿ ಅವರನ್ನು ಕಾಡಿಲ್ಲ. ಜಾತಿ, ಕುಲ, ಗೋತ್ರದ ಕೆಸರನ್ನು ಎರಚುವವರ ಮಧ್ಯದಲ್ಲಿಯೂ ತಾವು ನಂಬಿದ ಮೌಲ್ಯಗಳಿಗೆ ತಕ್ಕ ಹಾಗೆ ಬದುಕುವ ಬಹುದೊಡ್ಡ ಆಶಯವನ್ನು ತಮ್ಮ ನಡೆ-ನುಡಿಗಳಲ್ಲಿ ಗಟ್ಟಿಯಾಗಿ ಉಳಿಸಿಕೊಂಡಿರುವ ಮತ ಮತ್ತು ಮತೀಯ ರಾಜಕಾರಣ ಮಾಡದ ನಾಡಿನ ಅಪರೂಪದ ರಾಜ-ಕಾರಣಿಯಾಗಿದ್ದಾರೆ ಹೊರಟ್ಟಿಯವರು.

ಕಳೆದ ಶತಮಾನದ 80ರ ದಶಕವು ಕರ್ನಾಟಕದ ಪಾಲಿಗೆ ಹಲವು ಕಾರಣಗಳಿಂದ ಮನ್ವಂತರದ ಕಾಲವೆಂದು ಕರೆಯಿಸಿಕೊಳ್ಳುತ್ತಿದೆ. ಈ ಕಾಲದಲ್ಲಿ ರಾಜಕೀಯ ರಂಗ ಪ್ರವೇಶಿಸಿದ ಹೊರಟ್ಟಿಯವರು 1980ರಿಂದ ಸೋಲಿಲ್ಲದೇ ನಿರಂತರ 8 ಸಲ ಗೆಲ್ಲುತ್ತಿರುವುದಕ್ಕೆ ಪಕ್ಷ ಕಾರಣವೆಂದು ಹೇಳುವುದು ಅಸತ್ಯವಾದೀತು. ವೈಯಕ್ತಿಕ ವ್ಯಕ್ತಿತ್ವದ ಕಾರಣದಿಂದ ಸೋಲನ್ನು ಮಣಿಸಿ ಗದರಿಸಿ ನಿರಂತರ ಗೆಲುವಿನೊಂದಿಗೆ ಅವರು ದಿಟ್ಟ ಹೆಜ್ಜೆಗಳನ್ನು ಹಾಕುತ್ತಿದ್ದಾರೆಂಬುದು ಕನ್ನಡಿಗರ ಪ್ರಾಮಾಣಿಕ ಅಭಿಪ್ರಾಯವಾಗಿದೆ.

ಒಬ್ಬ ಸಾಮಾನ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಮಗನಾಗಿ, ಸ್ವತಃ ಶಿಕ್ಷಕರಾಗಿ, ಶಿಕ್ಷಕ ಸಮುದಾಯದ ಪ್ರತಿನಿಧಿಗಳಾಗಿ ವಿಧಾನ ಪರಿಷತ್ ಪ್ರವೇಶಿಸಿ, ಸಚಿವರಾಗಿ, ಮೂರು ಬಾರಿ ಸಭಾಪತಿಗಳಾಗಿ ಆಯ್ಕೆಗೊಂಡು ಒಂದೇ ಕ್ಷೇತ್ರದಿಂದ ಸತತ 8 ಸಲ ಗೆದ್ದು ವಿಶ್ವದಾಖಲೆ ನಿರ್ಮಿಸಿ, ಇಂಗ್ಲೆಂಡ್‌ನ ವರ್ಲ್ಡ್ ಬುಕ್ ಆಫ್ ರೆಕಾರ್ಡ್ಸ್ ಹಾಗೂ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ನ ದಾಖಲೆಯ ಹಿರಿಮೆಗೆ ಪಾತ್ರರಾದವರು. ಇಂತಹ ಮಾತೃಹೃದಯಿ ಗುಣ,



ಸ್ವಭಾವವುಳ್ಳ ವ್ಯಕ್ತಿಗಳು ರಾಜಕೀಯದಲ್ಲಿ ದೊರೆಯುವುದು ಅಪರೂಪ. ತಮ್ಮ ಜನಪರ ನಿಲುವುಗಳೊಂದಿಗೆ ಜನಮಾನಸದಲ್ಲಿ ರಾಜಕೀಯ ಕ್ಷೇತ್ರದ ದಂತ ಕಥೆಯಾಗಿರುವ ಬಸವರಾಜ ಹೊರಟ್ಟಿಯವರು ಮುಂದಿನ ಪೀಳಿಗೆಗೆ ಮಾದರಿ ರಾಜಕಾರಣಿಯಾಗಿದ್ದಾರೆ.

ಬಸವರಾಜ ಹೊರಟ್ಟಿಯವರ ಕುರಿತು 2008ರಲ್ಲಿ ಪ್ರಕಟಗೊಂಡ 'ದಿಟ್ಟ ಹೆಜ್ಜೆ' ಅಭಿನಂದನಾ ಗ್ರಂಥದ ಮರು ಮುದ್ರಣ ಹಾಗೂ 44 ವರ್ಷಗಳ ಸಂಸದೀಯ ಪಯಣದ ಹೆಜ್ಜೆಯ ಗುರುತುಗಳನ್ನು ಹೊತ್ತ 'ಮೈಲುಗಲ್ಲುಗಳೇ ಮಾತನಾಡುತ್ತವೆ' ಎಂಬ ಎರಡು ಕೃತಿಯನ್ನು ಕನ್ನಡದ ಕುಲಗುರುಗಳಾದ ಪೂಜ್ಯ ಡಾ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಶ್ರೀಮಠದ ಆಶ್ರಯದಲ್ಲಿ ಸ್ಥಾಪಿಸಿದ ಡಾ. ಎಂ.ಎಂ. ಕಲಬುರ್ಗಿ ಅಧ್ಯಯನ ಸಂಸ್ಥೆಯಿಂದ ಪ್ರಕಟವಾಗುತ್ತಿರುವುದು ಔಚಿತ್ಯಪೂರ್ಣವಾಗಿದೆ.

ಹೊರಟ್ಟಿಯವರ 44 ವರ್ಷಗಳ ಸುಧೀರ್ಘ ಸಂಸದೀಯ ಪಯಣದ ಯಶೋಗಾಥೆ ಕುರಿತು ಇದೇ ಏಪ್ರಿಲ್ 23ರಂದು ಸಾಯಂಕಾಲ 7.30 ಗಂಟೆಗೆ ತೋಂಟದಾರ್ಯ ಜಾತ್ರಾ ಮಹೋತ್ಸವದ ಮಹಾರಥೋತ್ಸವ ಕಾರ್ಯಕ್ರಮದಲ್ಲಿ ದಿಟ್ಟ ಹೆಜ್ಜೆ ಹಾಗೂ ಮೈಲುಗಲ್ಲುಗಳೇ ಮಾತನಾಡುತ್ತವೆ ಎಂಬ ಅಮೂಲ್ಯ ಗ್ರಂಥಗಳು ಲೋಕಾರ್ಪಣೆಗೊಳ್ಳಲಿವೆ. ಈ ಅಮೂಲ್ಯ ಗ್ರಂಥಗಳ ಬಿಡುಗಡೆ ಸಮಾರಂಭವು ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ಹಾಗೂ ಸಭಾಪತಿ ಬಸವರಾಜ ಹೊರಟ್ಟಿಯರ ಘನ ಉಪಸ್ಥಿತಿಯಲ್ಲಿ ಮತ್ತು ವಿವಿಧ ಮಠಾಧೀಶರ ಸಮ್ಮುಖದಲ್ಲಿ, ಗಣ್ಯಮಾನ್ಯರ ಉಪಸ್ಥಿತಿಯಲ್ಲಿ ನೆರವೇರಲಿದೆ. ಈ ಅರ್ಥಪೂರ್ಣ ಕಾರ್ಯಕ್ರಮಕ್ಕೆ ತಾವೂ ಬನ್ನಿ, ತಮ್ಮವರನ್ನೂ ಕರೆತನ್ನಿ.

– ಡಾ.ಬಸವರಾಜ ಧಾರವಾಡ.
ಪ್ರೊ.ಶಿವಾನಂದ ಪಟ್ಟಣಶೆಟ್ಟರ.

ಪುಟಾಣಿ ಮೇಘಾಳ ಪ್ರವಾಸ ಕಥನ

ಚಿತ್ರದುರ್ಗದ ಉಕ್ಕಿನ ಕೋಟೆ

ಮೊನ್ನೆಯ ದಿನ ಬೆಳ್ಳಂಬೆಳಗ್ಗೆ ಚಿತ್ರದುರ್ಗದ ಕೋಟೆಗೆ ಭೇಟಿ ನೀಡಿದೆವು. ಆ ದಿನ ಏಳು ಸುತ್ತಿನ ಕೋಟೆಯಂದೇ ಪ್ರಸಿದ್ಧವಾದ ಚಿತ್ರದುರ್ಗದ ಕೋಟೆಯನ್ನು ವೀಕ್ಷಿಸುವ ಸೌಭಾಗ್ಯ ನಮ್ಮದಾಗಿತ್ತು. ಇಲ್ಲಿ ಮೊದಲನೆಯ ಬಾಗಿಲ ಹತ್ತಿರ ಇರುವ ಗೋಡೆಯ ಮೇಲೆ ಸರ್ಪದ ಚಿತ್ರವಿದ್ದುದರಿಂದ ಈ ಏಳು ಸುತ್ತಿನ ಕೋಟೆಯಲ್ಲಿ ಸರ್ಪದ ಹಾಗೆ ವೇಗವಾಗಿ ನಡೆದಾಡಬೇಕಾಗುತ್ತದೆ. ನಾವು ಮೊದಲನೆಯ ಬಾಗಿಲ ಹತ್ತಿರ ಹೋದೆವು. ದೊಡ್ಡ ದೊಡ್ಡ ದ್ವಾರ ಬಾಗಿಲು ಇದ್ದು, ಇಲ್ಲಿ ಹೈದರಾಲಿಯ ಸೈನ್ಯವು ಆಗಾಗ ದಾಳಿ ಮಾಡುತ್ತಿದ್ದುದರಿಂದ ಕೋಟೆಯ ರಕ್ಷಣೆಗಾಗಿ ಒಳಗೆ ಬರಬಾರದೆಂದು ಮುಖ್ಯದ್ವಾರ ಬಾಗಿಲನ್ನು ಮುಚ್ಚುತ್ತಿದ್ದರು.

ಹೈದರಾಲಿಯ ಸೈನ್ಯವು ಕೋಟೆಯ ಒಳಗೆ ಹೋಗಲು ಆನೆಗಳನ್ನು ಬಳಸಿಕೊಂಡು ದ್ವಾರಬಾಗಿಲು ಒಡೆಯಲು ಪ್ರಯತ್ನ ಮಾಡುತ್ತಿದ್ದುದರಿಂದ ಚಿತ್ರದುರ್ಗದ ಕೋಟೆಯಲ್ಲಿ ಆನೆಯು ದ್ವಾರದ ಬಾಗಿಲು ಒಡೆಯಬಾರದು ಎಂಬ ಉದ್ದೇಶದಿಂದ ಆನೆಯು ದ್ವಾರಬಾಗಿಲನ್ನು ಒಡೆಯಲು ಹಿಂದಿನಿಂದ ಜೋರಾಗಿ

ಓಡಿ ಬರಬೇಕು. ಹೀಗೆ ಆನೆಗೆ ಓಡಿ ಬರಬಾರದೆಂದು ಗೋಡೆಯನ್ನು ಕಟ್ಟಿದ್ದಾರೆ.

ಚಿತ್ರದುರ್ಗದ ಏಳು ಸುತ್ತಿನ ಕೋಟೆಯನ್ನು ಸುತ್ತಿ ಬರುವಷ್ಟರಲ್ಲಿ ನಮಗೆಲ್ಲಾ ಸುಸ್ತಾಗಿ ಉಸ್ಸೆಂದು ನಿಟ್ಟುಸಿರು ಬಿಟ್ಟೆವು. ಆ ಕೋಟೆಯನ್ನು 'ಚಿತ್ರದುರ್ಗದ ಕಲ್ಲಿನ ಕೋಟೆ', 'ಉಕ್ಕಿನ ಕೋಟೆ' ಎಂದು ಏಕೆ ಕರೆಯುತ್ತಾರೆಂದರೆ, ಅಲ್ಲಿರುವ ಪ್ರತೀ ಕಲ್ಲಿನಲ್ಲೂ ಒಂದೊಂದು ವಿಶೇಷವಾದ ಐತಿಹಾಸಿಕ ಹಿನ್ನೆಲೆಯ ಮಹತ್ವದ ಕಥೆಯನ್ನು ಸ್ವಾರಸ್ಯಕರವಾಗಿ ತಿಳಿಸಿಕೊಡುತ್ತವೆ. ಆದ್ದರಿಂದ ಆ ಕೋಟೆಯನ್ನು ಚಿತ್ರದುರ್ಗದ ಉಕ್ಕಿನ ಕೋಟೆ ಎನ್ನುವರು.

ಅಲ್ಲಿರುವ ವೀರ ಮದಕರಿ ರಾಜನನ್ನು ಹೈದರಾಲಿಯ ಸೈನ್ಯವು ಸೋಲಿಸಿ ಬಂಧಿಸಿದ್ದುದರಿಂದ ರಾಜನ ಸಹೋದರಿಯರು ಆತ್ಮಹತ್ಯೆ ಮಾಡಿಕೊಂಡರು. ಅವರು ಆತ್ಮಹತ್ಯೆ ಮಾಡಿಕೊಂಡಿರುವ ಜಾಗಕ್ಕೆ ವಿಶೇಷವಾದ ಹೆಸರುಗಳಿಂದ ಕರೆಯುವುದು ವಾಡಿಕೆ. ಅಕ್ಕ ಆತ್ಮಹತ್ಯೆ ಮಾಡಿಕೊಂಡಿರುವ ಜಾಗವನ್ನು ಅಕ್ಕನ ಹೊಂಡ ಎಂದು ಕರೆಯುತ್ತಾರೆ. ತಂಗಿ ಆತ್ಮಹತ್ಯೆ ಮಾಡಿಕೊಂಡಿರುವ ಜಾಗವನ್ನು ತಂಗಿಯ ಹೊಂಡ ಎಂದು ಕರೆಯುತ್ತಾರೆ. ಕೋಟೆಯ ಮೇಲೆ ದೊಡ್ಡ ದೊಡ್ಡ ಗೋಡೆಗಳಿವೆ. ಆ ಗೋಡೆಯ ಮೇಲೆ ನಿಂತ ಕಾವಲುಗಾರರ ಪಡೆಯು ಯಾರಾದರೂ ಶತ್ರುಗಳ ಸೈನಿಕರು ದಾಳಿ ಮಾಡಬಹುದು ಎಂದು ಕಾವಲಿನವರು ಕಾಯುತ್ತಿದ್ದರು. ಅಲ್ಲೇ ತುಪ್ಪದ ಹೊಂಡವಿದೆ. ಏಕೆಂದರೆ ಯುದ್ಧ ಮಾಡುವಾಗ ಜನರು ಹೊರ ಬರಬಾರದೆಂಬ ವಿಶೇಷ ಎಚ್ಚರಿಕೆಯ ಹಿನ್ನೆಲೆಯಲ್ಲಿ ನಿರ್ಮಿಸಿದ್ದಾರೆ.

ಚಿತ್ರದುರ್ಗದ ಕೋಟೆಯ ಅತ್ಯಂತ ವಿಶೇಷ ಆಕರ್ಷಣೆಯೆಂದರೆ ಒನಕೆ ಓಬವ್ವನ ಐತಿಹಾಸಿಕ ಕಿಂಡಿ. ಒನಕೆ ಓಬವ್ವನ ಸಮಾಧಿ ಮತ್ತು ಅವಳು ಪೂಜೆ ಮಾಡಿದ ಆಂಜನೇಯ ಸ್ವಾಮಿಯ ದೇವಸ್ಥಾನವಿದೆ. ಹೈದರಾಲಿ ಸೈನ್ಯದ ಸೈನಿಕರು ಕಳ್ಳ ಕಿಂಡಿಯ ಮೂಲಕ ಒಳನುಸುಳುತ್ತಿರುವುದನ್ನು ನೋಡಿದಾಗ ಒನಕೆ ಓಬವ್ವ ಗಂಡನಿಗೆ ಊಟಕ್ಕೆ ಬಡಿಸಿದ್ದಳು. ಆದರೆ ಕುಡಿಯಲು ನೀರು ಇಲ್ಲದಿರುವುದನ್ನು ಗಮನಿಸಿ, ನೀರು ತರಲು ಹೋದ ಜಾಗವು ಇದೆ. ಸೈನಿಕರು ಯುದ್ಧ ಮಾಡಲು ಬರುತ್ತಿದ್ದ ಕಿಂಡಿಯೂ ಇದೆ. ಅವರು ಬರುವ ಸಮಯದಲ್ಲಿ ಅವಳು ಒನಕೆಯನ್ನು ತೆಗೆದುಕೊಂಡು ಬಂದು ಅವರನ್ನು ಸಾಯಿಸುತ್ತಾಳೆ ಮತ್ತು ಹೋರಾಡುತ್ತಾ, ಹೋರಾಡುತ್ತಾ ವೀರ ಮರಣ ಹೊಂದುತ್ತಾಳೆ.

ಈ ಸ್ಥಳದಲ್ಲಿ ಸಾಕಷ್ಟು ಸಿನಿಮಾ ಶೂಟಿಂಗ್‌ಗಳನ್ನು ಮಾಡಿದ್ದಾರೆ. ಆ ಚಿತ್ರದುರ್ಗದ ಕಲ್ಲಿನ ಕೋಟೆಯಲ್ಲಿರುವ ಪ್ರತಿಯೊಂದು ಕಲ್ಲುಗಳು ಒಂದೊಂದು ಇತಿಹಾಸದ ದ್ಯೋತಕಗಳಾಗಿವೆ. ಆ ಕೋ

'ಪುಲಿಗೆರೆ ಉತ್ಸವ'ದ ಸಂಜೆಯ ಕಾರ್ಯಕ್ರಮ ಉದ್ಘಾಟಿಸಿದ ಪ್ರಶಾಂತ ಹೆಗಡೆ

ಸಂಸ್ಥೆಯ ಉದ್ದೇಶಕ್ಕೆ ಬೆಂಬಲವಾಗಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಡಾ. ಸುಧಾಮೂರ್ತಿ ಅವರ ಇನ್ಫೋಸಿಸ್ ಪ್ರತಿಷ್ಠಾನ ಕೇವಲ ಕರ್ನಾಟಕವಷ್ಟೇ ಅಲ್ಲದೆ ದೇಶ-ವಿದೇಶಗಳಲ್ಲಿಯೂ ಕರ್ನಾಟಕದ ಸಂಗೀತ, ಕಲೆ, ಸಾಂಸ್ಕೃತಿಕ ವೈಭವವನ್ನು ವಿಜೃಂಭಿಸುವ ಶ್ರೇಷ್ಠ ಕಾರ್ಯವನ್ನು ಮಾಡುತ್ತಿದೆ ಎಂದು ಇನ್ಫೋಸಿಸ್ ಪ್ರತಿಷ್ಠಾನದ ವ್ಯವಸ್ಥಾಪಕ ಪ್ರಶಾಂತ ಹೆಗಡೆ ಹೇಳಿದರು.

ಅವರು ಶುಕ್ರವಾರದಿಂದ ಸೋಮೇಶ್ವರ ದೇವಸ್ಥಾನದಲ್ಲಿ ಪ್ರಾರಂಭಗೊಂಡಿರುವ 'ಪುಲಿಗೆರೆ ಉತ್ಸವ'ದ ಸಂಜೆಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಇನ್ಫೋಸಿಸ್ ಸಂಸ್ಥೆ ಶಿಕ್ಷಣ, ಆರೋಗ್ಯ, ಗ್ರಾಮೀಣಾಭಿವೃದ್ಧಿ, ಬಡವರ ಕಲ್ಯಾಣಕ್ಕಾಗಿ ಪ್ರತಿವರ್ಷ 500 ಕೋಟಿ ರೂ ವಿನಿಯೋಗಿಸುತ್ತಿದೆ. ಡಾ. ಸುಧಾಮೂರ್ತಿ ಅವರು ನಾಡಿನ ಪ್ರಾಚೀನ ದೇವಸ್ಥಾನ, ಶಿಲ್ಪಕಲೆ, ಸಾಂಸ್ಕೃತಿಕ ವೈಶಿಷ್ಟ್ಯತೆಯನ್ನು ಉಳಿಸಿ-ಬೆಳೆಸುವ ಅತ್ಯಂತ ಜವಾಬ್ದಾರಿಯುತ ಸೇವೆಯನ್ನು ಮಾಡುತ್ತಿದ್ದಾರೆ. ಅದರಂತೆ ಸೋಮೇಶ್ವರ ದೇವಸ್ಥಾನ ಜೀರ್ಣೋದ್ಧಾರಗೊಳಿಸಿ ಕಳೆದ 7 ವರ್ಷದಿಂದ ದೇವಸ್ಥಾನದಲ್ಲಿ 3 ದಿನಗಳ ಕಾಲ ಸಂಗೀತ, ನೃತ್ಯ, ಚಿತ್ರ ಸಂಭ್ರಮದ 'ಪುಲಿಗೆರೆ ಉತ್ಸವ' ಆಯೋಜಿಸುತ್ತಾ ಬಂದಿದ್ದಾರೆ. ಈ ಕಾರ್ಯ ನಿರಂತರವಾಗಿ ಮುಂದುವರೆಸುವ ಅವರ ಉದ್ದೇಶಕ್ಕೆ ಈ ಭಾಗದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸಹಕಾರ ನೀಡಬೇಕು ಎಂದರು.

ಮಾರು ಬಿಹಾಗ ರಾಗದಲ್ಲಿ ತಮ್ಮ ಗಾಯನವನ್ನು ಆರಂಭಿಸಿದ ಡಾ.ಅಶೋಕ, ಸುಮಾರು ಅರ್ಧ ಗಂಟೆಗೂ ಹೆಚ್ಚು ಕಾಲ ತಮ್ಮ ಕಂಚಿನ ಕಂಠದ ಮೂಲಕ ಎಲ್ಲರ ಮನಸೆಳೆದರು. ನಂತರ ಉಳ್ಳವರು ಶಿವಾಲಯವ ಮಾಡುವರು ನಾನೇನು ಮಾಡಲಿ... ವಚನ, ಪುರಂದರ ದಾಸರ ಬಾರೋ ನಮ್ಮ ಮನೆಗೆ... ದಾಸರ ಪದದ ನಂತರ ಶಿಶುನಾಳ ಶರೀಫರ ತತ್ವಪದ ಮುತ್ತು ತಂದೆನ... ಪ್ರಸ್ತುತ ಪಡಿಸಿದರು. ಅದರಲ್ಲೂ ಕಂಚಿನ ಕಂಠ ಹೊಂದಿರುವ ಡಾ.ಅಶೋಕ ಅವರು ನಲವಡಿ ಶ್ರೀಕಂಠ ಶಾಸ್ತ್ರಿಗಳ ರಚನೆಯ ಹೇಮರಡ್ಡಿ ಮಲ್ಲಮ್ಮ ನಾಟಕದ ಆಹಾ ಮಮತೆ ರಂಗಗೀತೆ ಹಿಂದಿನ ನಾಟಕಗಳ ವೈಭವವನ್ನು ಪರಿಚಯಿಸಿದಂತಿತ್ತು.

ಇವರಿಗೆ ಅಲ್ಲಮಪ್ರಭು ಕಡಕೋಳ ತಬಲಾ, ಮಧುಸೂಧನ ಭಟ್ ಹಾರ್ಮೋನಿಯಂ ಹಾಗೂ ಅರ್ಜುನ ವಠಾರ, ಪ್ರಿಯಾಂಕ ಹಾವೇರಿ ಸಹವಾದ್ಯಗಳಿಗೆ ಸಾಥ್ ನೀಡಿದರು. ಭಾರತೀ ವಿದ್ಯಾಭವನದ ನಿರ್ದೇಶಕಿ ನಾಗಲಕ್ಷ್ಮೀ ರಾವ್ ನಿರೂಪಿಸಿದರು.

2ನೇ ದಿನದ ಪುಲಿಗೆರೆ ಉತ್ಸವದ ಸಂಜೆಯ ಕಾರ್ಯಕ್ರಮದಲ್ಲಿ ಪಂ.ಬಸವರಾಜ ರಾಜಗುರು ಅವರ ಶಿಷ್ಯ, ಹೆಸರಾಂತ ಹಿಂದೂಸ್ಥಾನಿ ಗಾಯಕ ಮತ್ತು ಸಾವಿರಾರು ಸಂಗೀತ ಕಲಾವಿದರನ್ನು ನಾಡಿಗೆ ನೀಡುತ್ತಿರುವ ಹುಬ್ಬಳ್ಳಿಯ ಡಾ. ಪಂ.ಅಶೋಕ ಹುಗ್ಗಣ್ಣವರ ಅವರ ಹಿಂದೂಸ್ಥಾನಿ ಗಾಯನದಿಂದ ಸೇರಿದ್ದ ಸಂಗೀತಾಸ್ತಕರನ್ನು ರಾಗದ ಅಲೆಯಲ್ಲಿ ತೇಲಿಸಿದರು.

ಶ್ರೀ ಕೋಡಿಯಲ್ಲಮ್ಮ ದೇವಿಯ ಜಾತ್ರಾ ಮಹೋತ್ಸವ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಚೈತ್ರ ಶುದ್ಧ ದವನದ ಪೂರ್ಣಿಮೆ, ಏ.23 ರಂದು ಪಟ್ಟಣದ ಇತಿಹಾಸ ಪ್ರಸಿದ್ಧ ಶ್ರೀ ಕೋಡಿಯಲ್ಲಮ್ಮ ದೇವಿಯ ಜಾತ್ರಾ ಮಹೋತ್ಸವ ಜರುಗಲಿದೆ. ಜಾತ್ರಾ ಮಹೋತ್ಸವದ ಅಂಗವಾಗಿ ಬೆಳಿಗ್ಗೆ 8ಕ್ಕೆ ಸಕಲ ವಾದ್ಯ ವೈಭವಗಳೊಂದಿಗೆ ಕೋಡಿಯಲ್ಲಮ್ಮ ದೇವಿಯ ಭಾವಚಿತ್ರ ಮೆರವಣಿಗೆಯು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಲಿದ್ದು, ಸಂಜೆ 5ಕ್ಕೆ ರಥೋತ್ಸವ ನಡೆಯಲಿದೆ. ಏ.24ರಂದು ಸಂಜೆ 5ಕ್ಕೆ ಕಡುಬಿನ ಕಾಳಗ ಜರುಗಲಿದೆ.

ಪಾರಂಪರಿಕವಾಗಿ ನಡೆದು ಬಂದ ಜಂಗೀ ಬಯಲು ಕುಸ್ತಿ ಏ.25ರಿಂದ 27ರವರೆಗೆ 3 ದಿವಸಗಳ ಕಾಲ ದೇವಸ್ಥಾನ ಹತ್ತಿರದ ಬಯಲಿನಲ್ಲಿ ನಡೆಯಲಿವೆ ಎಂದು ಪ್ರಕಟಣೆ ತಿಳಿಸಿದೆ.

ರಾಜ್ಯ ಸರಕಾರದ ಪ್ರಮಾದದಿಂದ ವಿದ್ಯಾರ್ಥಿಗಳಿಗೆ ನಿರಾಸೆ

■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ನಡೆದ ಸಿಇಟಿ ಪರೀಕ್ಷೆಯಲ್ಲಿ ಸುಮಾರು 3.5 ಲಕ್ಷ ವಿದ್ಯಾರ್ಥಿಗಳು ಹಾಜರಾಗಿದ್ದು, ಪರೀಕ್ಷೆಯಲ್ಲಿ ಸುಮಾರು 40ರಿಂದ 45 ಪಠ್ಯಕ್ರಮದ ಹೊರತಾದ ಪ್ರಶ್ನೆಗಳನ್ನು ಕೇಳಲಾಗಿದೆ. ಮೂರುವರೆ ಲಕ್ಷ ವಿದ್ಯಾರ್ಥಿಗಳು ಹಾಗೂ ಅವರ ಪಾಲಕರು ಚಿಂತೆಗೀಡಾಗಿದ್ದಾರೆ. ಕೆಇಎ ಮಾಡಿರುವ ಈ ಪ್ರಮಾದದಿಂದಾಗಿ ವಿದ್ಯಾರ್ಥಿಗಳು ತಲೆ ಮೇಲೆ ಕೈ ಹೊತ್ತು ಕುಳಿತುಕೊಳ್ಳುವಂತಾಗಿದೆ ಎಂದು ಜೆಡಿಎಸ್ ಪಕ್ಷದ ರಾಜ್ಯದ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ರಾಜ್ಯ ಸರ್ಕಾರದ ನಡೆಯನ್ನು ಖಂಡಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಶೈಕ್ಷಣಿಕ ವರ್ಷ ಆರಂಭದ ಮೊದಲೇ ಪಠ್ಯಕ್ರಮವನ್ನು ನೀಡಲಾಗಿರುತ್ತದೆ. ಪಠ್ಯಕ್ರಮದಲ್ಲಿ ಅದರಲ್ಲಿ ಯಾವ್ಯಾವ ಪಠ್ಯಗಳು ಇವೆ ಹಾಗೂ ಅಳಿಸಿರುವ ಪಠ್ಯಗಳ ವಿವರವನ್ನು ನೀಡಲಾಗುತ್ತದೆ. ಆದರೆ ಅಳಿಸಲಾಗಿರುವ ಪಠ್ಯಗಳಿಂದ ಸುಮಾರು 40-45 ಪ್ರಶ್ನೆಗಳನ್ನು ಕೇಳಲಾಗಿದೆ. ಇದರಿಂದ ವಿದ್ಯಾರ್ಥಿಗಳಿಗೆ ಭಾರೀ ನಿರಾಸೆಯನ್ನು ಮೂಡಿಸಿದೆ. ಕೂಡಲೇ ರಾಜ್ಯ ಸರ್ಕಾರ ಈ ತಪ್ಪನ್ನು ಸರಿಪಡಿಸಲು ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಮತದಾನ ಪ್ರಜಾಪ್ರಭುತ್ವದ ಬುನಾದಿ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಕೆಎಲ್ಇ ಸೊಸೈಟಿಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ಖಗಿಇಇಕ ಮತ್ತು ಓಖಖ ಘಟಕವು ರೋಟರಿ ಕ್ಲಬ್ ಗದಗ ಬೆಟಗೇರಿ ಸಹಯೋಗದಲ್ಲಿ ಮತದಾನದ ಕುರಿತು ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಿತ್ತು.

ಗದಗ ಶಹರ ಬಿಇಓ ಆರ್.ಎಸ್. ಬುರಡಿ ಮಾತನಾಡಿ, ಭಾರತದಲ್ಲಿ ಪ್ರಜಾಪ್ರಭುತ್ವದ ಬುನಾದಿ ಮತದಾನ. ಭಾರತದಲ್ಲಿ ಪ್ರತಿಯೊಬ್ಬ ನಾಗರಿಕನಿಗೂ ಅದರಲ್ಲಿ ಭಾಗವಹಿಸುವ ಹಕ್ಕು ಮತ್ತು ಜವಾಬ್ದಾರಿ ಇದೆ. ಮತದಾನವು ಪ್ರಜಾಪ್ರಭುತ್ವದ ಮೂಲಾಧಾರವಾಗಿದೆ ಮತ್ತು ಭಾರತದ ರಾಜಕೀಯ ಭೂದೃಶ್ಯವನ್ನು ರೂಪಿಸುವಲ್ಲಿ ನಿರ್ಣಾಯಕ ಪಾತ್ರವನ್ನು ವಹಿಸುತ್ತದೆ ಎಂದರು.

ರೊ. ಶ್ರೀಧರ್ ಸುಲ್ತಾನಪೂರ ಮಾತನಾಡಿ, ಮತದಾನವು ನಾಗರಿಕರು ತಮ್ಮ ಪ್ರತಿನಿಧಿಗಳನ್ನು ಆಯ್ಕೆ ಮಾಡುವ ಹಕ್ಕನ್ನು ಚಲಾಯಿಸಲು ಮತ್ತು ನಿರ್ಧಾರ ತೆಗೆದುಕೊಳ್ಳುವ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅನುವು ಮಾಡಿಕೊಡುತ್ತದೆ ಎಂದರು.

ಡಾ. ಎ.ಕೆ. ಮಠ ಮಾತನಾಡಿ, ಪಾರದರ್ಶಕ ಪ್ರಜಾಪ್ರಭುತ್ವ ರಾಷ್ಟ್ರವನ್ನು ರಚಿಸಲು ಹೆಚ್ಚಿನ ಯುವ ಮತದಾರರು ಚುನಾವಣಾ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಪ್ರೋತ್ಸಾಹಿಸಲು ಮಹತ್ವದೊಂದಿಗೆ ಸಾಮಾನ್ಯ ಜನರಲ್ಲಿ ಜಾಗೃತಿ ಮೂಡಿಸಲು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಉಪ ಪ್ರಾಂಶುಪಾಲೆ ಡಾ.ವೀಣಾ ಇ, ಡಾ. ವಿಠಲ್ ಕೋಲಿ, ಆರ್‌ಸಿಜಿಬಿ ಅಧ್ಯಕ್ಷ ರೊ. ಚಂದ್ರಮೌಳಿ ಜಾಲಿ, ರೊ. ಎಸ್.ಎಸ್. ಹೊಸಳ್ಳಿಮಠ, ಅಕ್ಷಯ್ ಶೆಟ್ಟಿ, ಆರ್‌ಸಿಜಿಬಿ ಕಾರ್ಯದರ್ಶಿ ವೀಣಾ ತಿರ್ಲಾಪೂರ, ಕಾಲೇಜಿನ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಲೈಸನ್ಸ್ ನವೀಕರಣ ಶುಲ್ಕ ಹೆಚ್ಚಿಸದಿರಲು ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವತಿಯಿಂದ ಅನುಮತಿ ಪಡೆದ ಸಿವ್ಹಿಲ್ ಇಂಜಿನಿಯರ್ ನವೀಕರಣ ಶುಲ್ಕವನ್ನು ರೂ. 2000ದಿಂದ ರೂ. 15,000ಕ್ಕೆ ಏರಿಕೆ ಮಾಡಿರುವ ನಿರ್ಧಾರವನ್ನು ಖಂಡಿಸಿ, ವಿಶ್ವೇಶ್ವರಯ್ಯ ಇಂಜಿನಿಯರ್ಸ್ ಫೋರಂ ವತಿಯಿಂದ ನಗರಸಭೆಯ ಪೌರಾಯುಕ್ತ ಪ್ರಶಾಂತ ವರಗಪ್ಪನವರರಿಗೆ ಮನವಿ ಸಲ್ಲಿಸಲಾಯಿತು.

ಮನವಿ ಸ್ವೀಕರಿಸಿ ಮಾತನಾಡಿದ ಪೌರಾಯುಕ್ತರು, ಈಗಾಗಲೇ ಈ ವಿಷಯ ಚರ್ಚೆಯಾಗಿದ್ದು, ಈ ಬಗ್ಗೆ ಸೂಕ್ತ ನಿರ್ಧಾರ ತೆಗೆದುಕೊಳ್ಳುವ ಹಾಗೂ ನಗರಸಭೆಯಲ್ಲಿ ಆಗುವ ಅನಾನುಕೂಲಗಳ ಬಗ್ಗೆ ನಿಗಾವಹಿಸಿ ಸೂಕ್ತ ಪರಿಹಾರ ಮಾಡಿಕೊಡುವ ಭರವಸೆ ನೀಡಿದರು. ಪೌರಾಯುಕ್ತರ ಈ ನಿರ್ಧಾರಕ್ಕೆ ಫೋರಂನ ವತಿಯಿಂದ ಅಧ್ಯಕ್ಷ ಬುದೇಶ ಎಂ.ಬ್ಯಾಹಟ್ಟಿ ಧನ್ಯವಾದಗಳನ್ನು ತಿಳಿಸಿದರು. ಈ ಸಂದರ್ಭದಲ್ಲಿ ಫೋರಂನ ಸದಸ್ಯರು ಉಪಸ್ಥಿತರಿದ್ದರು.

ಎಚ್‌ಡಿಕೆ ಹೇಳಿಕೆ ವಿರುದ್ಧ ಮಹಿಳೆಯರ ಪ್ರತಿಭಟನೆ

■ ವಿಜಯಸಾಕ್ಷಿ ಸುದ್ದಿ, ಹಾವೇರಿ

ಸರ್ಕಾರದ ಗ್ಯಾರಂಟಿ ಯೋಜನೆಯನ್ನು ಪಡೆದುಕೊಳ್ಳುತ್ತಿರುವ ಕರ್ನಾಟಕದ ಹೆಣ್ಣುಮಕ್ಕಳ ಬಗ್ಗೆ ಮಾಜಿ ಮುಖ್ಯಮಂತ್ರಿಗಳಾದ ಎಚ್.ಡಿ. ಕುಮಾರಸ್ವಾಮಿಯವರು ನೀಡಿದ ಅವಹೇಳನಕಾರಿ ಹೇಳಿಕೆಯ ವಿರುದ್ಧ ಹಾವೇರಿ ನಗರದಲ್ಲಿ ಮಹಿಳೆಯರು ಪ್ರತಿಭಟನೆ ನಡೆಸಿದರು.

ಮಹಿಳಾ ಒಕ್ಕೂಟದ ಅಧ್ಯಕ್ಷೆ ಹಸೀನಾ ಎಡಿಯಾಲ್ ಮಾತನಾಡಿ, ಗ್ಯಾರಂಟಿ ಯೋಜನೆಯಿಂದ ಹೆಣ್ಣುಮಕ್ಕಳು ಆರ್ಥಿಕವಾಗಿ ಸಬಲರಾಗುತ್ತಿದ್ದಾರೆಂಬೋ ಹೊರತು ದಾರಿ ತಪ್ಪುತ್ತಿಲ್ಲ. ಜನಪರ ಯೋಜನೆಯನ್ನು ಟೀಕಿಸುವ ಭರದಲ್ಲಿ ಹೆಣ್ಣುಮಕ್ಕಳ ಕುರಿತು ನಾಲಗೆ ಹರಿಬಿಟ್ಟಿರುವ ಕುಮಾರಸ್ವಾಮಿಯವರು ಬಹಿರಂಗವಾಗಿ ಕ್ಷಮೆ ಯಾಚಿಸಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಹಾಜರಿದ್ದ ಮಹಿಳಾ ಕೂಲಿಕಾರ್ಮಿಕರು, ಗ್ಯಾರಂಟಿ ಯೋಜನೆಗಳು ತಮಗೆ ಎಷ್ಟು ಉಪಕಾರಿಯಾಗಿದೆ ಎಂಬ ಮಾಹಿತಿ ನೀಡಿದರು. ಕೆಲವರಿಗೆ ಗೃಹಲಕ್ಷ್ಮೀ ಯೋಜನೆಯ ಮೊತ್ತ ಔಷಧಿಗೆ, ಮಕ್ಕಳ ವಿದ್ಯಾಭ್ಯಾಸ ಮತ್ತಿತರ ಅಗತ್ಯಗಳಿಗೆ ಉಪಯೋಗವಾಗುತ್ತಿದೆ. ಹೊಟ್ಟೆ ತುಂಬಿದವರು ಈ ಮೊತ್ತದ ಬಗ್ಗೆ ಏನು ಬೇಕಾದರೂ ಹೇಳಬಹುದು. ಆದರೆ ಕಾಂಗ್ರೆಸ್ ಸರ್ಕಾರ ನಮ್ಮ ಅಗತ್ಯಗಳನ್ನು ಮನಗಂಡು ಗ್ಯಾರಂಟಿ ಯೋಜನೆಗಳನ್ನು ನೀಡಿದೆ. ಇದರ ಬಗ್ಗೆ ಕುಮಾರಸ್ವಾಮಿಯವರು ಹೇಳಿದ ಮಾತಿನಿಂದ ಅವರು ಖುದ್ದು ತಮ್ಮ ಗೌರವ ಕಳೆದುಕೊಂಡಿದ್ದಾರೆ ಎಂದು ಅಭಿಪ್ರಾಯಪಟ್ಟರು.

ಕಾರ್ಮಿಕ ಸಂಘದ ಉಪಾಧ್ಯಕ್ಷರಾದ ಶಿವರಾಜ್, ಪ್ರೇಮಕ್ಕ ಕರಿಬಸಣ್ಣ, ಕುಡುಚವ್ವ ಯಲ್ಲಾಪುರ, ಬೀಬಿ ಜೈನ್ ಎಳವಗಿ, ಸಾವಕ್ಕ ಕೊರಗರು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಗ್ರಾಮೀಣ ಪ್ರದೇಶಗಳಲ್ಲಿ ರೋಡ್ ಶೋ ನಡೆಸಿದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ

ಬಲಿಷ್ಠ ದೇಶಕ್ಕೆ ಬಲಿಷ್ಠ ನಾಯಕತ್ವ ಬೇಕು

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಧಾನಿ ನರೇಂದ್ರ ಮೋದಿಯವರು ಅಪ್ಪಟ ದೇಶಭಕ್ತರಾಗಿದ್ದು, ಅವರು ದೇಶಕ್ಕಾಗಿ ದಿನದ 18 ಗಂಟೆ ನಿರಂತರ ಕೆಲಸ ಮಾಡುತ್ತಾರೆ ಎಂದು ಮಾಜಿ ಮುಖ್ಯಮಂತ್ರಿ, ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದರು.

ಶನಿವಾರ ಗದಗ ತಾಲೂಕಿನ ಮಲ್ಲಸಂದ್ರ, ಅಸುಂಡಿ, ಬಿಂಕದಕಟ್ಟೆ, ಅಂತೂರು ಬೆಂತೂರು, ಹೊಸಳ್ಳಿ, ನೀಲಗುಂದ, ಚಿಂಚಲಿ ಹಾಗೂ ಕಲ್ಲೂರು ಗ್ರಾಮಗಳಲ್ಲಿ ರೋಡ್ ಶೋ ಮಾಡುವ ಮೂಲಕ ಮತಯಾಚನೆ ಮಾಡಿದರು.

ಬಲಿಷ್ಠ ದೇಶಕ್ಕೆ ಬಲಿಷ್ಠ ನಾಯಕತ್ವ ಬೇಕು. ಬಿಜೆಪಿ ಜಗತ್ತಿನ ಅತಿ ದೊಡ್ಡ ಪಕ್ಷ. ಪ್ರಧಾನಿ ನರೇಂದ್ರ ಮೋದಿಯವರು ದೇಶದ ಬಲಿಷ್ಠ ನಾಯಕರಾಗಿದ್ದಾರೆ. ಮೋದಿಯವರು ಏಕ ಭಾರತ ಶ್ರೇಷ್ಠ ಭಾರತ ಎಂದು ಸಾರಿದರು, ಇದು ಬಲಿಷ್ಠ ರಾಷ್ಟ್ರ ಎನ್ನುವ ಸಂದೇಶ ರವಾನಿಸಿದರು. ವಿದೇಶಗಳಿಗೆ ನಾವು ಭಿಕ್ಷೆ ಬೇಡುವವರಲ್ಲ, ದಾನ ಕೊಡುವವರು ಎಂದು ತೋರಿಸಿಕೊಟ್ಟಿದ್ದಾರೆ ಎಂದರು.

ರಾಜ್ಯ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಆರ್ಥಿಕ ಪರಿಸ್ಥಿತಿ ಹದಗೆಟ್ಟಿದೆ. ಜನರ ತೆರಿಗೆ ಹಣವನ್ನು ತಮ್ಮ ಗ್ಯಾರಂಟಿಗಳಿಗೆ ನೀಡಿದ್ದಾರೆ. ಅಷ್ಟೇ ಅಲ್ಲದೆ, ಈ ವರ್ಷ ಒಂದು ಲಕ್ಷ ಐದು ಸಾವಿರ ಕೋಟಿ ಸಾಲ ಮಾಡಿದ್ದಾರೆ. ಪ್ರತಿಯೊಬ್ಬರ ತಲೆಯ ಮೇಲೆ ಐವತ್ತು ಸಾವಿರ ರೂ. ಸಾಲ ಹೇರಿದ್ದಾರೆ ಎಂದು ಬಸವರಾಜ ಬೊಮ್ಮಾಯಿ ಆರೋಪಿಸಿದರು.

ದೇಶದಲ್ಲಿ ದುರ್ಬಲ ನಾಯಕತ್ವ ಇದ್ದಾಗ ಭಯೋತ್ಪಾದನಾ ಚಟುವಟಿಕೆಗಳು ಹೆಚ್ಚಾಗುತ್ತವೆ. ಬಲಿಷ್ಠ ನಾಯಕತ್ವ ಇದ್ದರೆ ಎಲ್ಲರೂ ಹೆದರುತ್ತಾರೆ. ಭಯೋತ್ಪಾದಕರಿಗೂ ಭಯ ಹುಟ್ಟುವಂತೆ ಮಾಡಿದ್ದಾರೆ ಎಂದು ಹೇಳಿದರು.

ಸಾಮಾಜಿಕವಾಗಿಯೂ ಮೋದಿಯವರು ಸಾಕಷ್ಟು ಸಹಾಯ ಮಾಡಿದ್ದಾರೆ. ಎಲ್ಲರಿಗೂ 10 ಕೆಜಿ ಅಕ್ಕಿ ಕೊಟ್ಟರು. ಕೋವಿಡ್ ಸಂದರ್ಭದಲ್ಲಿ ಎಲ್ಲರಿಗೂ ಮೂರು ಉಚಿತ ಲಸಿಕೆ ಹಾಕಿಸಿದರು. ಮೋದಿಯವರು ನಾಲ್ಕು ಕೋಟಿ ಮನೆ ಕಟ್ಟಿಸಿದ್ದಾರೆ, ದೇಶದಲ್ಲಿ ನೂರು ಕೋಟಿ ಮನೆಗಳಿಗೆ ಜಲ ಜೀವನ್ ಮಿಷನ್ ಮೂಲಕ ನಳದ ನೀರು ಕೊಡುತ್ತಿದ್ದಾರೆ. ಮೋದಿಯವರು ಶಾಶ್ವತ ಗ್ಯಾರಂಟಿ ಯೋಜನೆಗಳನ್ನು ನೀಡುತ್ತಿದ್ದಾರೆ ಎಂದರು.

ದೇಶಕ್ಕೆ ಅನ್ನ, ಮನೆಗಳಿಗೆ ನೀರು, ಎಲ್ಲರಿಗೂ ಲಸಿಕೆ ಕೊಟ್ಟು ಜೀವ ಉಳಿಸಿದ ನರೇಂದ್ರ ಮೋದಿಯವರ ಋಣ ತೀರಿಸುವ ಸಮಯ ಬಂದಿದೆ. ಅವರ ಋಣ ತೀರಿಸಲು ಬಿಜೆಪಿಗೆ ಮತ ಹಾಕಿ, ಈ ಚುನಾವಣೆಯಲ್ಲಿ ನನ್ನನ್ನು ಈ ಕ್ಷೇತ್ರದ ಸಂಸದನನ್ನಾಗಿ ಆಯ್ಕೆ ಮಾಡಿದರೆ, ನಿಮ್ಮ ಸೇವೆಯನ್ನು ಮಾಡುತ್ತೇನೆ ಎಂದು ಹೇಳಿದರು.

ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಬಿಜೆಪಿ ಮುಖಂಡ ಅನಿಲ್ ಮೆಣಸಿನಕಾಯಿ ಸೇರಿದಂತೆ ಪಕ್ಷದ ಮುಖಂಡರು, ಕಾರ್ಯಕರ್ತರು ಪಾಲ್ಗೊಂಡಿದ್ದರು.

ಶ್ರೀ ಸೋಮೇಶ್ವರನಿಗೆ ನಾದ ನೈವೇದ್ಯ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪುಲಿಗೆರೆ ಉತ್ಸವ 2ನೇ ದಿನವಾದ ಶನಿವಾರ ಉದಯರಾಗ-2 ಬೆಳ್ಳಂಬೆಳಿಗ್ಗೆ ಮಳೆ ಸಿಂಚನ ಮತ್ತು ಮೋಡ ಮುಸುಕಿದ ವಾತಾವರಣದಲ್ಲಿ ಸ್ಥಳೀಯ ಕಲಾವಿದ ಕೃಷ್ಣ ಕ್ಷತ್ರಿಯ ಅವರ ಶಹನಾಯಿ ವಾದನ ವಿಶೇಷ ಮೆರಗು ನೀಡಿತ್ತು.

ಸೂರ್ಯನ ಹೊಂಗಿರಣಗಳ ಚಿತ್ತಾರ, ದೇವಸ್ಥಾನದ ಘಂಟೆ-ಜಾಗಟೆಗಳ ಝೇಂಕಾರದ ನಡುವೆ ಕಲಾವಿದರ ಕುಟುಂಬದ ಶಹನಾಯಿ ಶ್ರೀ ಸೋಮೇಶ್ವರನಿಗೆ ನಾದ ನೈವೇದ್ಯ ಮಾಡಿದಂತಿತ್ತು. ರಾಗ ಗುಜರಿ ತೋಡಿಯಿಂದ ನಾದ ಮೊಳಗಿಸಿದ ಕೃಷ್ಣ ಕ್ಷತ್ರಿಯ, ಅರ್ಧ ಗಂಟೆಗೂ ಹೆಚ್ಚು ಕಾಲ ಕಿರವಾಣಿಯಲ್ಲಿ ದುನ್ ನುಡಿಸಿದರು. ನಂತರ ತೊರೆದು ಜೀವಿಸು ಬಹುದೆ ಹರಿ ನಿನ್ನ ಚರಣವನು ಎಂಬ ದಾಸರ ಪದ ನುಡಿಸಿದರು.

ಮಕ್ಕಳಾದ ಶ್ರೀಹರಿ ಕ್ಷತ್ರಿಯ ತಬಲಾ, ರಾಘವೇಂದ್ರ ಕ್ಷತ್ರಿಯ ಶಹನಾಯಿ ಸಹವಾದ್ಯದ ಸಾಥ ನೀಡಿದರು.

ನಿಧನ ವಾರ್ತೆ

ಗಿರ

ಗದಗ ಜಿಲ್ಲೆಯಲ್ಲಿ ಅಬ್ಬರದ ಮಳೆ, ಸಿಡಿಲು ಬಡಿದು ಎತ್ತು ಸಾವು, ರೈತ ಕುಟುಂಬದ ಆಕ್ರಂದನ

■ ವಿಜಯಸಾಕ್ಷಿ ಸುದ್ದಿ, ಗದಗ

ಶನಿವಾರ ಮುಂಜಾನೆ ಜಿಲ್ಲೆಯ ಮುಂಡರಗಿ ತಾಲೂಕಿನಲ್ಲಿ ಸಿಡಿಲು, ಗುಡುಗು ಸಮೇತ ಮಳೆ ಸುರಿದು ಅನಾಹುತ ಸೃಷ್ಟಿಸಿದೆ.

ಒಂದೂವರೆ ಗಂಟೆಗೂ ಹೆಚ್ಚು ಕಾಲ ಅಬ್ಬರದ ಮಳೆ ಸುರಿದಿದ್ದು, ಸಿಡಿಲು ಬಡಿದು ಮುಂಡರಗಿ ತಾಲೂಕಿನ ಕೆಲೂರು ಗ್ರಾಮದಲ್ಲಿ ಎಮ್ಮಿ ಹಾಗೂ ಎತ್ತು ಮೃತಪಟ್ಟಿದೆ.

ರೈತ ಶಂಕ್ರಪ್ಪ ಸೋಂಪುರ ಅವರಿಗೆ ಸೇರಿದ ಎತ್ತು, ಹನಮಪ್ಪ ಕೊಂಚಿಗೇರಿ ಎಂಬುವವರಿಗೆ ಸೇರಿದ ಎಮ್ಮಿ ಮೃತಪಟ್ಟಿದ್ದು, ಎರಡು ರೈತ ಕುಟುಂಬದ ಸದಸ್ಯರ ಆಕ್ರಂದನ ಮುಗಿಲು ಮುಟ್ಟಿದೆ. ಪ್ರೀತಿಯಿಂದ ಸಾಕಿದ ಎತ್ತು ಕಳೆದುಕೊಂಡ ಶಂಕ್ರಪ್ಪನ ಕುಟುಂಬ ಕಂಗಾಲಾಗಿದೆ.

ಗದಗ-ಬೆಟಗೇರಿಯಲ್ಲೂ ಸಿಡಿಲು- ಗುಡುಗು ಸಮೇತ ಮಳೆ ಸುರಿದಿದ್ದು, ಬೆಟಗೇರಿಯ ರೈಲ್ವೆ ಸೇತುವೆ ಜಲಾವೃತಗೊಂಡಿದೆ. ವಾಹನ ಸವಾರರು ಪರದಾಡುವಂತಾಯಿತು. ಬೆಟಗೇರಿಯ ಕುರಹಟ್ಟಿ ಪೇಟೆಯ ನೀರಿನ ಟ್ಯಾಂಕ್ ಬಳಿಯ ತಗ್ಗು ಪ್ರದೇಶಗಳ ಮನೆಗಳಿಗೆ ನೀರು ನುಗ್ಗಿ ಅವಾಂತರ ಸೃಷ್ಟಿಯಾಗಿತ್ತು. ಮನೆಗೆ ನುಗ್ಗಿದ ನೀರು ಹೊರ ಹಾಕಲು ಜನರು ಹರಸಾಹಸ ಪಟ್ಟರು.

ಉಪನ್ಯಾಸ ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಏಪ್ರಿಲ್ 21ರ ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವದಳದ 1590ನೇ ಶರಣ ಸಂಗಮದಲ್ಲಿ ಎಡೆಯೂರು ಶ್ರೀ ತೋಂಟದ ಸಿದ್ಧಲಿಂಗ ಶಿವಯೋಗಿಗಳ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಹಿರಿಯರಾದ ಶರಣ ಎಸ್. ಎನ್. ಹಕಾರಿ ವಹಿಸುವರು. ಶರಣೆ ನಿವೃತ್ತ ಶಿಕ್ಷಕಿ ನೀಲಲೋಚನಾ ಸಿ.ಹಂಚಿನಾಳ ಉಪನ್ಯಾಸ ಮಾಡುವರು. ಕಾರಣ, ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಿಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

'ಚೈತ್ರದ ಚಿಗುರು' ಬೇಸಿಗೆ ಶಿಬಿರ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಸರಕಾರಿ ಮಾದರಿ ಪ್ರಾಥಮಿಕ ಶಾಲೆ ನಂ.4ರ ಸಹಯೋಗದಲ್ಲಿ ಏ.22 ಹಾಗೂ 23ರಂದು ಬೆಳಿಗ್ಗೆ 8.30ರಿಂದ 12 ಗಂಟೆವರೆಗೆ ಮಕ್ಕಳ ಮನೋವಿಕಾಸಕ್ಕಾಗಿ 'ಚೈತ್ರದ ಚಿಗುರು' ಕಥೆ-ಕವನ, ಆಟ-ನಾಟಕ, ಚಿತ್ರಗಳ ಚಿತ್ತಾರಗಳ ಬೇಸಿಗೆ ಶಿಬಿರ ಹಮ್ಮಿಕೊಳ್ಳಲಾಗಿದೆ. ಶಿಬಿರದಲ್ಲಿ ಸಂಪನ್ಮೂಲ, ಸೃಜನಶೀಲ ಶಿಕ್ಷಕರು/ಸಾಹಿತಿಗಳಾದ ಆರ್.ಎಸ್. ಪಾಟೀಲ, ಪ್ರವೀಣ ಗಾಯಕರ, ರಾಜೇಶ ಉಮಚಗಿ, ವಿ.ಎಂ. ಹೂಗಾರ, ಬಿ.ಟಿ. ಹೆಬ್ಬಾಳ, ಆಯ್.ಎಂ. ಗಾಣಗೇರ, ನಿರ್ಮಲಾ ಅರಕ ಮತ್ತಿತರರು ಭಾಗವಹಿಸುವರು. ಶಿಬಿರ ಸಂಪೂರ್ಣ ಉಚಿತವಾಗಿದ್ದು, 5ರಿಂದ 9ನೇ ವರ್ಗದ ಯಾವುದೇ ಶಾಲೆಯ ವಿದ್ಯಾರ್ಥಿಗಳು ಪಾಲ್ಗೊಳ್ಳಬಹುದು. ಕ್ರಾಫ್ಟ್, ಚಿತ್ರಕಲೆಗೆ ಬೇಕಾಗುವ ಮುಖ್ಯ ಸಾಮಗ್ರಿಗಳನ್ನು ಒದಗಿಸಲಾಗುವುದು ಎಂದು ತಾಲೂಕಾ ಕಸಾಪ ಪ್ರಕಟಣೆಯಲ್ಲಿ ತಿಳಿಸಿದೆ.

ನಾಲ್ಕು ಅಭ್ಯರ್ಥಿಗಳ ನಾಮಪತ್ರ ತಿರಸ್ಕೃತ । 25 ಅಭ್ಯರ್ಥಿಗಳ ನಾಮಪತ್ರಗಳು ಕ್ರಮಬದ್ಧ

ನಾಮಪತ್ರ ಪರಿಶೀಲನೆ ಮುಕ್ತಾಯ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಲೋಕಸಭಾ ಮತಕ್ಷೇತ್ರದ ಸಾರ್ವತ್ರಿಕ ಚುನಾವಣೆಗೆ ಸ್ವೀಕೃತವಾದ ಎಲ್ಲ ನಾಮಪತ್ರಗಳ ಪರಿಶೀಲನೆ ಕಾರ್ಯ ಶನಿವಾರ ಬೆಳಿಗ್ಗೆ ಚುನಾವಣಾಧಿಕಾರಿಗಳ ಕಾರ್ಯಾಲಯದಲ್ಲಿ, ಅಭ್ಯರ್ಥಿಗಳ ಮತ್ತು ಸೂಚಕರ ಸಮ್ಮುಖದಲ್ಲಿ ಜರುಗಿತು.

ನಾಮಪತ್ರ ಸಲ್ಲಿಸಿದ್ದ 29 ಅಭ್ಯರ್ಥಿಗಳ ಎಲ್ಲ ನಾಮತ್ರಗಳನ್ನು ಪರಿಶೀಲಿಸಿ, ಸರಿಯಾದ ದಾಖಲೆ ಸಲ್ಲಿಸದ ನಾಲ್ಕು ಅಭ್ಯರ್ಥಿಗಳ 7 ನಾಮಪತ್ರಗಳು ಹಾಗೂ ಇಬ್ಬರು ಅಭ್ಯರ್ಥಿಗಳ ತಲಾ ಒಂದು ನಾಮಪತ್ರಗಳು ತಿರಸ್ಕೃತವಾಗಿದ್ದು, 25 ಅಭ್ಯರ್ಥಿಗಳ 35 ನಾಮಪತ್ರಗಳು ಸ್ವೀಕೃತವಾಗಿವೆ ಎಂದು ಚುನಾವಣಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ನಾಮಪತ್ರದೊಂದಿಗೆ ಅಗತ್ಯ ದಾಖಲೆಗಳನ್ನು ಸಲ್ಲಿಸದ ಹಿನ್ನೆಲೆಯಲ್ಲಿ, ರಾಷ್ಟ್ರೀಯ ಜನ ಸಂಭಾವನಾ ಪಾರ್ಟಿಯ ನಾಗರಾಜ ಶ್ರೀಧರ ಶೇಟ್, ಬಹುಜನ ಸಮಾಜ ಪಕ್ಷದ ಶೋಭಾ ಬಳ್ಳಾರಿ, ರೈತ ಭಾರತ ಪಾರ್ಟಿಯ ಹೇಮರಾಜ ಬಡ್ನಿ ಹಾಗೂ ಪಕ್ಷೇತರ ಅಭ್ಯರ್ಥಿ ರಾಹುಲ್ ಗಾಂಧಿ.ಎನ್ ಅವರ ನಾಮಪತ್ರಗಳು ತಿರಸ್ಕೃತವಾಗಿವೆ. ಶಿವಾನಂದ ಮುತ್ತಣ್ಣವರ ಅವರು ಭಾರತೀಯ ಜನತಾ ಪಕ್ಷದ ಹೆಸರಿನಲ್ಲಿ ಸಲ್ಲಿಸಿದ್ದ ನಾಮಪತ್ರ ತಿರಸ್ಕೃತವಾಗಿದ್ದು, ಅವರು ಪಕ್ಷೇತರರಾಗಿ ಸಲ್ಲಿಸಿದ್ದ ನಾಮಪತ್ರ ಸ್ವೀಕೃತವಾಗಿದೆ. ಮತ್ತು ವೀಣಾ ಜನಗಿ ಅವರು ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಹೆಸರಿನಲ್ಲಿ ಸಲ್ಲಿಸಿದ್ದ ನಾಮಪತ್ರ ತಿರಸ್ಕೃತವಾಗಿದ್ದು, ಅವರು ಪಕ್ಷೇತರ ಅಭ್ಯರ್ಥಿಯಾಗಿ ಸಲ್ಲಿಸಿದ್ದ ನಾಮಪತ್ರ ಸ್ವೀಕೃತವಾಗಿದೆ.

ಒಟ್ಟಾರೆಯಾಗಿ ಧಾರವಾಡ ಲೋಕಸಭಾ ಮತಕ್ಷೇತ್ರಕ್ಕೆ ಸಲ್ಲಿಕೆ ಅಗಿದ್ದ 29 ಅಭ್ಯರ್ಥಿಗಳ 44 ನಾಮಪತ್ರಗಳಲ್ಲಿ ನಾಲ್ಕು ಅಭ್ಯರ್ಥಿಗಳ 7 ನಾಮಪತ್ರಗಳು ಮತ್ತು ಇಬ್ಬರು ಅಭ್ಯರ್ಥಿಗಳ ತಲಾ ಒಂದು ನಾಮಪತ್ರಗಳು ಸೇರಿ 9 ನಾಮಪತ್ರಗಳು ತಿರಸ್ಕೃತವಾಗಿವೆ. 25 ಅಭ್ಯರ್ಥಿಗಳ 35 ನಾಮಪತ್ರಗಳು ಕ್ರಮಬದ್ಧವಾಗಿದ್ದು, ಸ್ವೀಕೃತವಾಗಿವೆ ಎಂದು ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.

ನಾಮಪತ್ರಗಳ ಪರಿಶೀಲನೆ ಸಂದರ್ಭದಲ್ಲಿ ಧಾರವಾಡ ಲೋಕಸಭಾ ಮತಕ್ಷೇತ್ರದ ಸಾಮಾನ್ಯ ವೀಕ್ಷಕರಾದ ಹಿರಿಯ ಐಎಎಸ್ ಅಧಿಕಾರಿ ಅಜಯ ಗುಪ್ತಾ, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಮತ್ತು ನಾಮಪತ್ರ ಸಲ್ಲಿಸಿದ್ದ ಅಭ್ಯರ್ಥಿಗಳು, ಅಭ್ಯರ್ಥಿಗಳ ಸೂಚಕರು ಉಪಸ್ಥಿತರಿದ್ದರು.

ನಾಮಪತ್ರ ಹಿಂಡೆಯಲು ಅವಕಾಶ:

ಧಾರವಾಡ ಲೋಕಸಭಾ ಚುನಾವಣೆಗೆ ಸಲ್ಲಿಸಿರುವ ನಾಮಪತ್ರಗಳು ಕ್ರಮಬದ್ಧವಾಗಿರುವ ಅಭ್ಯರ್ಥಿಗಳು ಇಚ್ಛಿಸಿದಲ್ಲಿ ತಮ್ಮ ನಾಮಪತ್ರಗಳನ್ನು ಹಿಂಪಡೆಯಲು ಏ.22ರ ಮಧ್ಯಾಹ್ನ 3 ಗಂಟೆಯವರೆಗೆ ಅವಕಾಶವಿದೆ. ನಾಮಪತ್ರ ಹಿಂಪಡೆಯಲು ಅಗತ್ಯವಿರುವ ನಮೂನೆ 5ರ ಅರ್ಜಿಯು ಚುನಾವಣಾಧಿಕಾರಿಗಳ ಕಚೇರಿಯಲ್ಲಿ ಲಭ್ಯವಿದ್ದು, ಅದನ್ನು ಪಡೆದು ನಿಗದಿತ ಸಮಯದೊಳಗೆ ಸಲ್ಲಿಸಬಹುದು. ನಾಮಪತ್ರ ಹಿಂಪಡೆಯುವ ಅವಧಿ ಮುಗಿದ ಮೇಲೆ ಅಂತಿಮವಾಗಿ ಚುನಾವಣಾ (ಕಣದಲ್ಲಿ) ಸ್ಪರ್ಧೆಯಲ್ಲಿ ಉಳಿಯುವ ಅಭ್ಯರ್ಥಿಗಳ ಹೆಸರು ಪ್ರಕಟಿಸಲಾಗುವುದು ಎಂದು ಚುನಾವಣಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.

ಲೋಕಸಭಾ ಚುನಾವಣೆ ಸಂಬಂಧ ಅಧಿಕಾರಿಗಳೊಂದಿಗೆ ಸುದೀರ್ಘ ಚರ್ಚೆ ನಡೆಸಿದ ಡಿಸಿ

ಚುನಾವಣೆಯನ್ನು ಅಚ್ಚುಕಟ್ಟಾಗಿ ನಡೆಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಚುನಾವಣೆಯ ಸಿದ್ಧತೆಗೆ ಸಂಬಂಧಿಸಿದಂತೆ ನೋಡಲ್ ಅಧಿಕಾರಿಗಳು, ಸಹಾಯಕ ಚುನಾವಣಾಧಿಕಾರಿಗಳು ಹಾಗೂ ತಹಸೀಲ್ದಾರರ ಜೊತೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರು ಶನಿವಾರ ಸಭೆ ನಡೆಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಅಂಚೆ ಮತಪತ್ರ, ಅಗತ್ಯ ಸೇವೆಗಳಡಿ ಅಂಚೆ ಮತದಾನ, ಮತಗಟ್ಟೆಗೆ ತೆರಳಲು ಆಗದಿರುವ ಹಾಗೂ ಈಗಾಗಲೇ ಒಪ್ಪಿಗೆ ನೀಡಿರುವ 85 ವರ್ಷ ಮೇಲ್ಪಟ್ಟ ಹಾಗೂ ವಿಕಲಚೇತನರಿಂದ 'ಮನೆ ಮತದಾನ' ಮಾಡಿಸುವ ಕಾರ್ಯ, ಮತದಾರರ ಮಾಹಿತಿ ಚೀಟಿ ಹಂಚಿಕೆ ಹೀಗೆ ಚುನಾವಣೆ ಸಂಬಂಧ ಹಲವು ವಿಷಯಗಳ ಕುರಿತು ಜಿಲ್ಲಾಧಿಕಾರಿಗಳು ಸುದೀರ್ಘ ಚರ್ಚೆ ನಡೆಸಿದರು.

ಲೋಕಸಭಾ ಸಾರ್ವತ್ರಿಕ ಚುನಾವಣೆಯನ್ನು ಗಂಭೀರವಾಗಿ ಪರಿಗಣಿಸಿ ಕರ್ತವ್ಯ ನಿರ್ವಹಿಸಬೇಕು. ಚುನಾವಣೆಗೆ ಸಂಬಂಧಿಸಿದಂತೆ ಕಾಲಕಾಲಕ್ಕೆ ನಡೆಯುವ ತರಬೇತಿ ಕಾರ್ಯಾಗಾರದಲ್ಲಿ ಪಾಲ್ಗೊಂಡು ಚುನಾವಣೆಯನ್ನು ಅಚ್ಚುಕಟ್ಟಾಗಿ ನಡೆಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಸೂಚಿಸಿದರು.

ಜಿ.ಪಂ ಸಿಇಓ ಎಸ್. ಭರತ್ ಮಾತನಾಡಿ, ಚುನಾವಣಾ ಕರ್ತವ್ಯವನ್ನು ಪರಿಣಾಮಕಾರಿಯಾಗಿ ನಿರ್ವಹಿಸಬೇಕು. ಮತದಾನ ಹೆಚ್ಚಳಕ್ಕೆ ಪ್ರೋತ್ಸಾಹಿಸಬೇಕು. ಚುನಾವಣೆಗೆ ನಿಯೋಜಿಸಿರುವ ಅಧಿಕಾರಿಗಳು ತಂಡವಾಗಿ ಕಾರ್ಯ ನಿರ್ವಹಿಸಬೇಕು. ಮಹಿಳೆಯರು ಸೇರಿದಂತೆ ಅರ್ಹರೆಲ್ಲರೂ ಮತದಾನದ ದಿನದಂದು ಮತಗಟ್ಟೆಗೆ ತೆರಳಿ ಮತ ಚಲಾಯಿಸುವಂತಾಗಲು ಹೆಚ್ಚಿನ ಜಾಗೃತಿ ಮೂಡಿಸುವಂತೆ ಸಲಹೆ ನೀಡಿದರು.

ಇದೇ ಏಪ್ರಿಲ್ 22ರಂದು ಸಂಜೆ 5 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಮುಂಭಾಗದಲ್ಲಿ ಮತದಾನದ ಮಹತ್ವ ಕುರಿತು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಪ್ರತಿಜ್ಞಾ ವಿಧಿ ಸ್ವೀಕರಿಸುವ ಕಾರ್ಯಕ್ರಮ ನಡೆಯಲಿದೆ ಎಂದು ಹೇಳಿದರು.

> ಮತದಾನದ ಮಹತ್ವ ಕುರಿತು ಇದೇ ಏಪ್ರಿಲ್ 28 ರಂದು 'ನಮ್ಮ ನಡೆ-ಮತಗಟ್ಟೆ ಕಡೆಗೆ' ಜಾಗೃತಿ ಅಭಿಯಾನ ನಡೆಯಲಿದ್ದು, ಮತಗಟ್ಟೆವಾರು ಕಾರ್ಯಕ್ರಮಗಳನ್ನು ಆಯೋಜಿಸಿ ಮತದಾನ ಮಹತ್ವ ಕುರಿತು ಅರಿವು ಮೂಡಿಸುವಂತೆ ಇದೇ ಸಂದರ್ಭದಲ್ಲಿ ಜಿ.ಪಂ ಸಿಇಓ ಎಸ್. ಭರತ್ ಸಲಹೆ ನೀಡಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಸುರೇಖಾ ಅವರು ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಚುನಾವಣಾ ಆಯೋಗದ ನಿರ್ದೇಶನದಂತೆ ಕರ್ತವ್ಯ ನಿರ್ವಹಿಸಬೇಕು. ಸಮಸ್ಯೆಗಳಿದ್ದಲ್ಲಿ ಮೇಲಾಧಿಕಾರಿಗಳ ಗಮನಕ್ಕೆ ತರಬೇಕು ಎಂದು ಸಲಹೆ ನೀಡಿದರು.

ಉಪ ವಿಭಾಗಾಧಿಕಾರಿ ವೆಂಕಟೇಶ ನಾಯ್ಕ ಅವರು ಚುನಾವಣೆ ಸಂಬಂಧ ಹಲವು ಮಾಹಿತಿ ನೀಡಿದರು. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಅಮಿತ ಬಿದರಿ, ತಹಸೀಲ್ದಾರರಾದ ಶ್ರೀನಿವಾಸ ಕುಲಕರ್ಣಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳಿದ್ದರು.

ಆರೋಪಿಗೆ ಗಲ್ಲುಶಿಕ್ಷೆ ನೀಡಲು ಆಗ್ರಹಿಸಿ ವಿವಿಧ ಸಂಘಟನೆಗಳಿಂದ ಪ್ರತಿಭಟನೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಅಖಿಲ ಭಾರತ ಜಂಗಮ ಸೇವಾ ಸಮಿತಿ, ವೀರಶೈವ ಮಹಾಸಭಾ, ಪ್ರಜಾ ಪರಿವರ್ತನಾ ವೇದಿಕೆ, ಕ್ರಾಂತಿ ಸೇನೆ, ವೀರ ಮದಕರಿ ಸೇನೆ, ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘಟನೆ ಹಾಗೂ ವಿವಿಧ ಹಿಂದೂಪರ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ಹುಬ್ಬಳ್ಳಿಯ ವಿದ್ಯಾರ್ಥಿನಿ ನೇಹಾ ಹಿರೇಮಠರನ್ನು ಹತ್ಯೆಗೈದ ಆರೋಪಿ ಫಯಾಜ್‌ನನ್ನು ಗಲ್ಲಿಗೇರಿಸುವಂತೆ ಆಗ್ರಹಿಸಿ ಶನಿವಾರ ಮುಳಗುಂದ ನಾಕಾದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಮೆರವಣಿಗೆ ನಡೆಸಿ, ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಹಾಗೂ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಇದಕ್ಕೂ ಮುನ್ನ ನಗರದ ಮುಳಗುಂದ ನಾಕಾದಲ್ಲಿ ಮಾನವ ಸರಪಳಿ ನಿರ್ಮಿಸಿ ಕೆಲಕಾಲ ರಸ್ತೆತಡೆ ನಡೆಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ವೀರಶೈವ ಮಹಾಸಭಾದ ಜಿಲ್ಲಾಧ್ಯಕ್ಷ ಬಸವರಾಜ ಕೊರ್ಲಹಳ್ಳಿ, ಯಾವುದೇ ಸಮಾಜದ ಹೆಣ್ಣುಮಕ್ಕಳಿಗೂ ಈ ರೀತಿ ಅನ್ಯಾಯವಾಗಬಾರದು ಎಂದರು. ಕ್ರಾಂತಿ ಸೇನೆ ಜಿಲ್ಲಾಧ್ಯಕ್ಷ ಬಾಬು ಬಾಕಳೆ, ಜಂಗಮ ಸಮಾಜದ ಮುಖಂಡ ವಿ.ಕೆ. ಗುರುಮಠ, ನಿವೃತ್ತ ಯೋಧ ರಾಜು ಹುಲಕೋಟಿ ಮುಂತಾದವರು ಮಾತನಾಡಿದರು.

ಈ ಸಂದರ್ಭದಲ್ಲಿ ಅಖಿಲ ಭಾರತ ಜಂಗಮ ಸೇವಾ ಸಮಿತಿ ಅಧ್ಯಕ್ಷ ಪ್ರಭಯ್ಯ ದಂಡಾವತಿಮಠ, ಕ್ರಾಂತಿಸೇನೆಯ ಮಹಿಳಾಧ್ಯಕ್ಷೆ ರಾಣಿ ಚಂದಾವರಿ, ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಅಧ್ಯಕ್ಷ ಬಸಲಿಂಗಪ್ಪ, ವಿ.ಬಿ. ಹಿರೇಮಠ ಮೇಮೊರಿಯಲ್ ಟ್ರಸ್ಟ್‌ನ ವಿ.ವಿ. ಹಿರೇಮಠ, ಸಂಗಮ್ಮ ಹಿರೇಮಠ, ವಿಜಯಕುಮಾರ ಹಿರೇಮಠ, ಮುರುಗೇಶ ಬಡ್ನಿ, ಸಂಗಮೇಶ ಮೆಣಸಿನಕಾಯಿ, ಬಸವರಾಜ ಬ್ಯಾಹಟ್ಟಿ, ಡಾ. ಜಿ.ಎಸ್. ಹಿರೇಮಠ, ಸಂತೋಷ, ಶಿವಕುಮಾರ, ಉಮಾಪತಿ ಭೂಸನೂರಮಠ, ಬಸಯ್ಯ ನಂದಿಲಕೋಲಮಠ ಶ್ರೀಧರ ಜವಳಿ, ಆರ್.ಎಂ. ಹಿರೇಮಠ, ಪ್ರವೀಣ ಹಬೀಬ ಮುಂತಾದವರು ಉಪಸ್ಥಿತರಿದ್ದರು.

ಬಸವರಾಜ ಹೊರಟ್ಟಿಯವರ ಸಾಧನೆಗಳ ಕುರಿತಾದ ಪುಸ್ತಕಗಳ ಲೋಕಾರ್ಪಣೆ ಏ.23ಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ



ಶಿಕ್ಷಕ ಸಮುದಾಯದ ನಂಬುಗಂಬಂ ನಾಯಕರಾಗಿ, ಅವರ ಬಾಳಿಗೆ ದಾರಿ ತೋರಿದ ಬಸವರಾಜ ಹೊರಟ್ಟಿಯವರ 44 ವರ್ಷಗಳ ಸುದೀರ್ಘ ಸಂಸದೀಯ ಪಯಣದ ಯಶೋಗಾಥೆ ಕುರಿತು ಏ.23ರಂದು ಸಾಯಂಕಾಲ 7.30 ಗಂಟೆಗೆ ಜ.ತೋಂಟದಾರ್ಯ ಜಾತ್ರಾ ಮಹೋತ್ಸವದ ಮಹಾರಥೋತ್ಸವ ಕಾರ್ಯಕ್ರಮದಲ್ಲಿ ಡಾ. ಎಂ.ಎಂ. ಕಲಬುರ್ಗಿ ಅಧ್ಯಯನ ಸಂಸ್ಥೆಯಿಂದ 'ದಿಟ್ಟ ಹೆಜ್ಜೆ' ಹಾಗೂ 'ಮೈಲುಗಲ್ಲುಗಳೇ ಮಾತನಾಡುತ್ತವೆ' ಎಂಬ ಎರಡು ಅಮೂಲ್ಯ ಗ್ರಂಥಗಳು ಲೋಕಾರ್ಪಣೆಗೊಳ್ಳಲಿವೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸುವರು. ಕಲಬುರ್ಗಿ ಸಾರಂಗಮಠದ ಸಾರಂಗಧರ ದೇಶೀಕೇಂದ್ರ ಮಹಾಸ್ವಾಮಿಗಳು, ಚಿತ್ತರಗಿ-ಇರಕಲ್ ವಿಜಯಮಹಾಂತೇಶ್ವರ ಮಠದ ಗುರುಮಹಾಂತ ಮಹಾಸ್ವಾಮಿಗಳು ಸಮ್ಮುಖ ವಹಿಸುವರು. ಸಮಾರಂಭದ ಘನ ಉಪಸ್ಥಿತಿಯನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿಯವರು ವಹಿಸುವರು. ಮಾಜಿ ಸಚಿವ ಎಸ್.ಎಸ್. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ ಅತಿಥಿಗಳಾಗಿ ಭಾಗವಹಿಸುವರು.

ಸಿದ್ಧಯ್ಯನಕೋಟೆ ವಿಜಯಮಹಾಂತೇಶ್ವರ ಶಾಖಾಮಠದ ಬಸವಲಿಂಗ ಮಹಾಸ್ವಾಮಿಗಳನ್ನು ಸಂಮಾನಿಸಲಾಗುವುದು. ಧಾರವಾಡ ಆಕಾಶವಾಣಿ ಕಲಾವಿದರಾದ ಕುಮಾರ ಮರಡೂರ ಹಾಗೂ ಖುತಿಕಾ ನೃತ್ಯ ನಿಕೇತನ ತಂಡದ ನಾಗರತ್ನ ಹಡಗಲಿಯವರಿಂದ ವಚನ ನೃತ್ಯರೂಪಕ ಜರುಗುವುದು ಎಂದು ತೋಂಟದಾರ್ಯ ವಿದ್ಯಾಪೀಠದ ಆಡಳಿತಾಧಿಕಾರಿ ಶಿವಾನಂದ ಪಟ್ಟಣಶೆಟ್ಟರ ಹಾಗೂ ಡಾ.ಬಸವರಾಜ ಧಾರವಾಡ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

ಇಳೆಯನ್ನು ತಂಪಾಗಿಸಿದ ಮಳೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಳೆದ ವರ್ಷದ ಬರಗಾಲ, ಪ್ರಸಕ್ತ ವರ್ಷದ ಸುಡು ಬಿಸಿಲ ತಾಪ, ನೀರಿನ ಕೊರತೆಯಿಂದ ಕಂಗೆಟ್ಟಿದ್ದ ಜನ ಸಮುದಾಯಕ್ಕೆ ಶನಿವಾರ ಬೆಳ್ಳಂಬೆಳಿಗ್ಗೆ ಗುಡುಗು-ಸಿಡಿಲಬ್ಬರದೊಂದಿಗೆ ಸುರಿದ ಮಳೆ ಕೊಂಚ ನೆಮ್ಮದಿ ಮೂಡಿಸಿತು. ತಾಲೂಕಿನ